ಸಂಪುಟ : 9 ಸಂಚಿಕೆ 95 ಪುಟ : 4 ಬೆಲೆ: 3.00 ಗುರುವಾರ ಮೇ 16 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 9 Issue : 95 Pages : 4 Price : 3.00 Thursday May 16 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25




## ಗದಗ-ಬೆಟಗೇರಿ ಸಾರ್ವಜನಿಕರ ಗಮನಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ



ಹಮ್ಮಿಗಿ ಡ್ಯಾಮ್‌ನಲ್ಲಿ ನೀರಿನ ಮಟ್ಟ ಬಹಳಷ್ಟು ಕುಸಿದಿದ್ದರಿಂದ ಹಮ್ಮಿಗಿಯಲ್ಲಿ ನೀರಿನ ಸರಬರಾಜು ಮಾಡುವ ಕಾಲುವೆಯನ್ನು ಸ್ವಚ್ಛಗೊಳಿಸಲಾಗುತ್ತಿದೆ. ಕಾರಣ, ಮುಂದಿನ 4-5 ದಿನಗಳ ಕಾಲ ನೀರಿನ ಪೂರೈಕೆಯಲ್ಲಿ ವ್ಯತ್ಯಯವಾಗಲಿದೆ.

ನೀರು ಸರಬರಾಜು ಪ್ರಾರಂಭವಾಗುವವರೆಗೂ ಟ್ಯಾಂಕರ್ ಮೂಲಕ ಪ್ರತಿ ವಾರ್ಡಿಗೆ ನೀರಿನ ಪೂರೈಕೆಯನ್ನು ಗದಗ-ಬೆಟಗೇರಿ ನಗರಸಭೆಯ ವತಿಯಿಂದ ಮಾಡಲಾಗುತ್ತಿದ್ದು, ಗದಗ-ಬೆಟಗೇರಿಯ ಜನತೆ ನಗರಸಭೆಯೊಂದಿಗೆ ಸಹಕರಿಸಬೇಕೆಂದು ಗದಗ-ಬೆಟಗೇರಿ ನಗರಸಭೆಯ ಸ್ಥಾಯಿ ಸಮಿತಿ ಅಧ್ಯಕ್ಷ ಅನಿಲ ಅಬ್ಬಿಗೇರಿ ಪತ್ರಿಕಾ ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

## ಎಕ್ಸೆಲ್ ಅಕಾಡೆಮಿಕ್ಸ್‌ನಿಂದ ಉಚಿತ ಕಾರ್ಯಾಗಾರ

■ ವಿಜಯಸಾಕ್ಷಿ ಸುದ್ದಿ, ಗದಗ

ಬೆಂಗಳೂರಿನ ಎಕ್ಸೆಲ್ ಅಕಾಡೆಮಿಕ್ಸ್ ಸಂಸ್ಥೆಯ ವತಿಯಿಂದ ವಿಜ್ಞಾನ ವಿಭಾಗದ ದ್ವಿತೀಯ ಪಿಯುಸಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ CET, NEET, JEE ಬಗ್ಗೆ Free Counselling ಸಭೆಯನ್ನು ಮೇ. 18ರಂದು ಗದಗ ನಗರದ ಕೃಷ್ಣಾ ಟಾಕೀಸ್ ಹತ್ತಿರವಿರುವ ಶ್ರೀ ತೋಂಟದ ಸಿದ್ದಲಿಂಗೇಶ್ವರ ಕಲ್ಯಾಣ ಮಂಟಪದಲ್ಲಿ ಬೆಳಿಗ್ಗೆ 9.45ರಿಂದ ಮಧ್ಯಾಹ್ನ 1.45ವರೆಗೆ ಏರ್ಪಡಿಸಲಾಗಿದೆ.

ಈ ಕಾರ್ಯಾಗಾರದಲ್ಲಿ ಸಂಪನ್ಮೂಲ ವ್ಯಕ್ತಿಗಳು NEET, K-CETಗೆ ಅರ್ಹತೆ ಕಟಾಯಿಸಿದ ಅಂಕಗಳು, ರಾಜ್ಯ ಹಾಗೂ ರಾಷ್ಟ್ರಮಟ್ಟದ ಮೀಸಲಾತಿ ಪ್ರಮಾಣಗಳು, ವಿವಿಧ ಕೋರ್ಸ್‌ಗಳ ಆಯ್ಕೆ, ಉತ್ತಮ ಕಾಲೇಜುಗಳ ಆಯ್ಕೆ, ಆನ್‌ಲೈನ್ ಮೂಲಕ ದಾಖಲಾತಿ, ಪ್ರವೇಶ ಪ್ರಕ್ರಿಯೆಗಳ ಬಗ್ಗೆ ಮಾಹಿತಿಯನ್ನು ನೀಡುತ್ತಾರೆ. ಅರ್ಹ ವಿದ್ಯಾರ್ಥಿಗಳು ಪೋಷಕರೊಂದಿಗೆ ಆಗಮಿಸಿ ಇದರ ಸದುಪಯೋಗವನ್ನು ಪಡೆಯಬೇಕೆಂದು ಪತ್ರಿಕಾ ಪ್ರಕಟಣೆಯ ಮೂಲಕ ಕೋರಲಾಗಿದೆ.

## ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಹುಬ್ಬಳ್ಳಿಯ ಗೋಕುಲ ರಸ್ತೆಯಲ್ಲಿರುವ ಜಿಟಿಟಿಸಿ ಕೇಂದ್ರವು ಟೂಲರೂಮ್ ಮಶಿನಿಸ್ಟ್ ವೃತ್ತಿ ತರಬೇತಿಗೆ ಅರ್ಜಿ ಆಹ್ವಾನಿಸಿರುತ್ತದೆ. ಎಸ್.ಎಸ್.ಎಲ್.ಸಿ ಉತ್ತೀರ್ಣ ಅಥವಾ ಅನುತ್ತೀರ್ಣರಾದ 16 ರಿಂದ 22 ವಯೋಮಿತಿಯೊಳಗಿನ ಆಸಕ್ತ ಯುವಕ ಅಭ್ಯರ್ಥಿಗಳು ಈ ತರಬೇತಿಗೆ ಅರ್ಹರಿರುತ್ತಾರೆ.

ಒಂದು ವರ್ಷ ಅವಧಿಯ ಟೂಲರೂಮ್ ಮಶಿನಿಸ್ಟ್ ತರಬೇತಿಯಲ್ಲಿ ಟರ್ನರ್, ಮಿಲ್ಲರ್, ಗ್ರೈಂಡರ್, ಫಿಟ್ಟರ್ ಸಿ.ಎನ್.ಸಿ. ಟ್ರೇಡ್‌ಗಳಲ್ಲಿ ಪ್ರಾಯೋಗಿಕ ತರಬೇತಿ ನೀಡಲಾಗುವುದು. ಜೊತೆಗೆ ಅಟೋಕ್ಯಾಡ್, ಕನ್ನಡ ಮತ್ತು ಇಂಗ್ಲಿಷ್ ಭಾಷಾ ಕೌಶಲ್ಯಗಳನ್ನು ಹಾಗೂ ಉದ್ಯೋಗ ಕೌಶಲ್ಯಗಳನ್ನು ಕಲಿಸಲಾಗುತ್ತದೆ. ಒಂದು ವರ್ಷದ ತರಬೇತಿಯ ನಂತರ ಪ್ರತಿಷ್ಠಿತ ಟೂಲಿಂಗ್ ಮತ್ತು ವಿಮಾನ ತಯಾರಿಕೆ ಕೈಗಾರಿಕೆಗಳಲ್ಲಿ ಉದ್ಯೋಗ ದೊರಕಿಸಿ ಕೊಡಲಾಗುವುದು.

ಜಿಟಿಟಿಸಿ ಸಂಸ್ಥೆಯು ಅತ್ಯಾಧುನಿಕ ಸಿ.ಎನ್.ಸಿ ಯಂತ್ರೋಪಕರಣಗಳನ್ನು ಅಳವಡಿಸಿಕೊಂಡು ಸ್ಥಳೀಯ ಕೈಗಾರಿಕೆಗಳಿಗೆ ತಾಂತ್ರಿಕ ಸೇವೆಯನ್ನು ಒದಗಿಸುತ್ತಿದ್ದು, ವಿದ್ಯಾರ್ಥಿಗಳಿಗೆ ಆನ್-ದ-ಜಾಬ್ ತರಬೇತಿ ನೀಡುತ್ತದೆ.

ಆಸಕ್ತ ವಿದ್ಯಾರ್ಥಿಗಳು ಮತ್ತು ಪಾಲಕರು ಜಿಟಿಟಿಸಿ ಕೇಂದ್ರಕ್ಕೆ ಭೇಟಿ ನೀಡಿ ಮೇ 31ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ತರಬೇತಿಗಳು ಜೂನ್ 1 ರಿಂದ ಪ್ರಾರಂಭವಾಗುತ್ತವೆ. ಹೆಚ್ಚಿನ ಮಾಹಿತಿಗಾಗಿ ಜಿಟಿಟಿಸಿ, ಇಂಡಸ್ಟ್ರಿಯಲ್ ಎಸ್ಟೇಟ್, ಗೋಕುಲ ರಸ್ತೆ, ಹುಬ್ಬಳ್ಳಿ, ದೂರವಾಣಿ 0836-2333159, 81838 60552 ಸಂಪರ್ಕಿಸಬಹುದಾಗಿದೆ. ಸದುಪಯೋಗವನ್ನು ಪಡೆಯಬೇಕೆಂದು ಪತ್ರಿಕಾ ಪ್ರಕಟಣೆಯ ಮೂಲಕ ಕೋರಲಾಗಿದೆ.

### ರೈತರಿಗೆ ಅನುಕೂಲ ಮಾಡುವ ಉದ್ದೇಶವಿದ್ದರೆ ಸಾಲ ಮನ್ನಾ ಮಾಡಲಿ: ಬಸವರಾಜ ಬೊಮ್ಮಾಯಿ

# ರಾಜ್ಯ ಸರ್ಕಾರದಿಂದ ರೈತರಿಗೆ ಅನ್ಯಾಯ

■ ವಿಜಯಸಾಕ್ಷಿ ಸುದ್ದಿ, ಹಾವೇರಿ

ರಾಜ್ಯ ಸರಕಾರವು ಕೇಂದ್ರ ಸರಕಾರ ನೀಡಿದ ಬರ ಪರಿಹಾರದಲ್ಲಿ 2 ಸಾವಿರ ರೂ. ಕಡಿತ ಮಾಡಿ ನೀಡುತ್ತಿದ್ದು, ಬರ ಪರಿಹಾರವನ್ನು ಸಾಲಕ್ಕೆ ಹೊಂದಾಣಿಕೆ ಮಾಡಿ ರೈತರಿಗೆ ದೊಡ್ಡ ಅನ್ಯಾಯ ಮಾಡುತ್ತಿದೆ ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಆರೋಪಿಸಿದರು.

ಹಾವೇರಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ರಾಜ್ಯ ಸರಕಾರ ಬರ ಪರಿಹಾರವಾಗಿ ಕೊಟ್ಟಿದ್ದೇ 2 ಸಾವಿರ. ಈಗ ಅದರಲ್ಲೂ ಕಡಿತ ಮಾಡಿ ರೈತರ ಖಾತೆಗೆ ಹಣ ನೀಡುತ್ತಿದ್ದಾರೆ. ಅಲ್ಲದೇ ಕೇಂದ್ರ ಸರ್ಕಾರ ಪರಿಹಾರ ನೀಡಿರುವ ಹಣವನ್ನು ರೈತರ ಸಾಲಕ್ಕೆ ಹೊಂದಾಣಿಕೆ ಮಾಡುತ್ತಿದ್ದಾರೆ. ರೈತರು ಸಂಕಷ್ಟದಲ್ಲಿ ಇದ್ದಾರೆ ಎನ್ನುವ ಕಾರಣಕ್ಕೆ ಪರಿಹಾರ ನೀಡುವುದು. ಈಗ ಅದನ್ನೂ ಸಾಲಕ್ಕೆ ಹೊಂದಾಣಿಕೆ ಮಾಡಿದರೆ, ಅದು ಹೇಗೆ ಪರಿಹಾರವಾಗುತ್ತದೆ ಎಂದು ಪ್ರಶ್ನಿಸಿದರು.

ರಾಜ್ಯ ಸರ್ಕಾರಕ್ಕೆ ರೈತರಿಗೆ ಸಹಾಯ ಮಾಡುವ ಮನಸಿದ್ದರೆ, ಕಾಂಗ್ರೆಸ್ ಚುನಾವಣಾ ಘೋಷಣಾ ಪತ್ರದಲ್ಲಿ ಹೇಳಿರುವಂತೆ ರೈತರ ಸಾಲ ಮನ್ನಾ ಮಾಡಲಿ, ಕಾಂಗ್ರೆಸ್ ಘೋಷಣಾ ಪತ್ರ ಕರ್ನಾಟಕದಿಂದ ಪ್ರಾರಂಭವಾಗಲಿ ಎಂದು ಆಗ್ರಹಿಸಿದರು.

ಇನ್ನು ಹುಬ್ಬಳ್ಳಿಯಲ್ಲಿ ಮತ್ತೊಬ್ಬ ಯುವತಿಯ ಹತ್ಯೆಯಾಗಿರುವ ಪ್ರಕರಣದ ಕುರಿತು ಪತ್ರಕರ್ತರು



ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಬಸವರಾಜ ಬೊಮ್ಮಾಯಿ, ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಕುಸಿದಿರುವುದ್ದಕ್ಕೆ ಇಂತಹ ಘಟನೆಗಳೇ ಸಾಕ್ಷಿಯಾಗಿವೆ. ಇಂತಹ ಹೇಯ ಕೃತ್ಯ ಯಾರೇ ಮಾಡಿರಲಿ ಅವರನ್ನು ತಂದು ಗಲ್ಲಿಗೇರಿಸಿ, ಶಿಕ್ಷೆ ಕೊಡಿಸಿ. ಹಾಡಹಗಲೇ ಇಂತಹ ಘೋರ ಕೃತ್ಯ ನಡೆದರೂ ಪೊಲೀಸರು ರಾಜಕಾರಣದ ಪ್ರಕರಣಗಳು, ಜಾತಿನಿಂದನೆ ಪ್ರಕರಣಗಳನ್ನು ದಾಖಲಿಸುವುದು, ಕ್ಲಬ್ ನಡೆಸುವುದರಲ್ಲಿಯೇ ಮಗ್ನರಾಗಿದ್ದಾರೆಯೇ ಹೊರತು ಈ ರೀತಿಯಲ್ಲಿ ಕೊಲೆ, ಅತ್ಯಾಚಾರಗಳು ನಡೆಯುತ್ತಿದ್ದರೂ ಯಾವುದೇ ಕ್ರಮ ತೆಗೆದುಕೊಳ್ಳುತ್ತಿಲ್ಲ. ಇಂತಹ ಹೇಯ ಕೃತ್ಯಗಳಲ್ಲಿ ರಾಜ್ಯ ಸರಕಾರವೇ ಮುಂದೆ ನಿಂತು ಕುಮ್ಮಕ್ಕು ನೀಡುವುದನ್ನು ನಾನು ಎಂದೂ ನೋಡಿರಲಿಲ್ಲ. ಇದೊಂದು ಜನವಿರೋಧಿ ಸರಕಾರ ಎಂದು ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು.

> ನಮ್ಮ ಅವಧಿಯಲ್ಲಿ ಪ್ರವಾಹ ಬಂದಾಗ ರೈತರಿಗೆ ಎರಡು ಪಟ್ಟು ಪರಿಹಾರ ನೀಡಿದ್ದೆವು. ಇವರು ಪರಿಹಾರವಾಗಿ ಕೊಟ್ಟಿರುವುದೇ 2 ಸಾವಿರ ರೂಪಾಯಿ, ಅದನ್ನೂ ಕಡಿತಗೊಳಿಸಿ ರೈತರಿಗೆ ನೀಡುತ್ತಿರುವುದು ಘೋರ ಅನ್ಯಾಯವಾಗಿದೆ. ಈ ಪ್ರಮಾದವನ್ನು ರಾಜ್ಯ ಸರ್ಕಾರ ತಕ್ಷಣವೇ ಸರಿಪಡಿಸಬೇಕು. ಇಲ್ಲದಿದ್ದರೆ ಸರ್ಕಾರದ ವಿರುದ್ಧ ಹೋರಾಟ ಹಮ್ಮಿಕೊಳ್ಳುವುದು ಅನಿವಾರ್ಯವಾಗಲಿದೆ ಎಂದು ಬಸವರಾಜ ಬೊಮ್ಮಾಯಿ ಎಚ್ಚರಿಸಿದರು.



### ಅಕ್ಕನ ಬಳಗದ 50ನೇ ವರ್ಷದ ಸುವರ್ಣ ಸಂಭ್ರಮ ಸಮಾರಂಭದಲ್ಲಿ ಬಸವರಾಜ ಬೊಮ್ಮಾಯಿ

# ಯುವ ಪೀಳಿಗೆ ಆಧ್ಯಾತ್ಮಿಕ ಚಿಂತನೆ ಮೈಗೂಡಿಸಿಕೊಳ್ಳಬೇಕು

■ ವಿಜಯಸಾಕ್ಷಿ ಸುದ್ದಿ, ಹಾವೇರಿ (ಸವಣೂರು)

ಜಗತ್ತಿನಲ್ಲಿಯೇ ಅತ್ಯಂತ ಶ್ರೇಷ್ಠವಾದ ಭಕ್ತಿಯ ಕ್ರಾಂತಿ ನಿರಂತರವಾಗಿ ನಡೆದಿರುವುದು ಭಾರತ ದೇಶದಲ್ಲಿ, ಅದೂ ಕನ್ನಡ ನಾಡಿನಲ್ಲಿ ಎಂದು ಮಾಜಿ ಮುಖ್ಯಮಂತ್ರಿ, ಶಾಸಕ ಬಸವರಾಜ ಬೊಮ್ಮಾಯಿ ಹೇಳಿದರು.

ಬುಧವಾರ ಸವಣೂರು ಪಟ್ಟಣದ ಶ್ರೀ ಲಲಾಟೇಶ್ವರ ಕಲ್ಯಾಣ ಮಂಟಪದಲ್ಲಿ ಜರುಗಿದ ಅಕ್ಕನ ಬಳಗದ 50ನೇ ವರ್ಷದ ಸುವರ್ಣ ಸಂಭ್ರಮ ಸಮಾರಂಭದಲ್ಲಿ 'ಸುವರ್ಣ ಸಂಭ್ರಮ' ಸ್ಮರಣ ಸಂಚಿಕೆ ಬಿಡುಗಡೆಗೊಳಿಸಿ ಅವರು ಮಾತನಾಡಿದರು.

ವೈಚಾರಿಕವಾಗಿ ಮುಂಬರುವ ಯುವ ಪೀಳಿಗೆ ಜ್ಞಾನದ ಮೂಲಕ ಆಧ್ಯಾತ್ಮಿಕ ಚಿಂತನೆಯನ್ನು ಮೈಗೂಡಿಸಿಕೊಳ್ಳುವದು ಅವಶ್ಯವಾಗಿದೆ. ಸವಣೂರಿನ ಅಕ್ಕನ ಬಳಗ ಕ್ರಿಯಾಶೀಲವಾಗಿ 50 ವರ್ಷಗಳ ಕಾಲ ಕೆಲಸ ಮಾಡಿಕೊಂಡು ಬಂದಿದೆ ಎಂದರು.

ಶುದ್ಧ ಅಂತಃಕರಣ, ಭಕ್ತಿಯ ಭಾವ ಅಕ್ಕ ಮಹಾದೇವಿಯವರ ವಚನದಲ್ಲಿದೆ. ಯಾವುದನ್ನೂ ಬಯಸದೇ ಶುದ್ಧ ಅಂತಃಕರಣದಲ್ಲಿ ಲೀನವಾಗಿ ಕರಗಿರುವ ಶರಣೆ ಅಕ್ಕಮಹಾದೇವಿ.



ಅಂತಹ ಶರಣರು ನಡೆದಾಡಿದ ಪುಣ್ಯ ಭೂಮಿಯಲ್ಲಿ ಜನಿಸಿದ ನಾವೇ ಧನ್ಯರು. ನಮ್ಮ ಸಂಸ್ಕೃತಿ, ಸಂಸ್ಕಾರದ ಮೌಲ್ಯಗಳು ನಮ್ಮ ಪರಿವಾರದಲ್ಲಿ ಉಳಿದುಕೊಂಡಿವೆ ಎಂದರೆ ಅದು ತಾಯಂದಿರಿಂದ. ತಾಯಂದಿರು ಆಧ್ಯಾತ್ಮಿಕವಾಗಿ ತಮ್ಮನ್ನು ತಾವು ತೊಡಗಿಸಿಕೊಂಡು ಭಕ್ತಿಯ ಭಾವ, ಮಠಗಳ ಪಾತ್ರದಿಂದ ಕನ್ನಡ ನಾಡಿನಲ್ಲಿ ಇಂದು ಸದ್ಭಾವನಾ, ಸದ್ವಿಚಾರದ ಸಂಸ್ಕಾರದಿಂದ ಇರಲು ಸಾಧ್ಯವಾಗಿದೆ. ಇವುಗಳನ್ನು ಉಳಿಸಿ, ಬೆಳೆಸಿಕೊಂಡು ಹೋಗುವದು ನಮ್ಮ ಜವಾಬ್ದಾರಿಯಾಗಿದೆ ಎಂದರು.

ಸಮಾರಂಭದ ಉದ್ಘಾಟನೆಯನ್ನು ಮಾಜಿ ಸಚಿವೆ ಲೀಲಾವತಿ ಆರ್.ಪ್ರಸಾದ್ ಜ್ಯೋತಿ ಬೆಳಗಿಸುವ ಮೂಲಕ ನೆರವೇರಿಸಿ ಮಾತನಾಡಿದರು. ಚನ್ನಮ್ಮ ಬೊಮ್ಮಾಯಿ 'ಅಕ್ಕನ ವಚನಗಳು' ಕೃತಿ ಲೋಕಾರ್ಪಣೆಗೊಳಿಸಿ ಮಾತನಾಡಿದರು.

ಸಮಾರಂಭದ ಸಾನ್ನಿಧ್ಯ ವಹಿಸಿದ್ದ ಕಲ್ಮಠದ ಮಹಾಂತ ಸ್ವಾಮೀಜಿ, ಅಡವಿಸ್ವಾಮಿಮಠದ ಕುಮಾರ ಸ್ವಾಮೀಜಿ, ಸದಾಶಿವಪೇಟೆ ವಿರಕ್ತಮಠದ ಮಲ್ಲಿಕಾರ್ಜುನ ಸ್ವಾಮೀಜಿ, ಹೂವಿನಶಿಗ್ಲಿ ವಿರಕ್ತಮಠದ ಚನ್ನವೀರ ಸ್ವಾಮೀಜಿ ಆಶೀರ್ವಚನ ನೀಡಿದರು.

ಅಕ್ಕನ ಬಳಗದ ಅಧ್ಯಕ್ಷೆ ಕವಿತಾ ಬಡಶೆಟ್ಟಿ ಅಧ್ಯಕ್ಷತೆ ವಹಿಸಿದ್ದರು. ಈ ಸಂದರ್ಭದಲ್ಲಿ ಮಾಜಿ ಮುಖ್ಯಮಂತ್ರಿ, ಶಾಸಕ ಬಸವರಾಜ ಬೊಮ್ಮಾಯಿ ದಂಪತಿಯನ್ನು ಸನ್ಮಾನಿಸಲಾಯಿತು. ಮಾಜಿ ಶಾಸಕ ರಾಜಶೇಖರ ಸಿಂಧೂರ ಅವರ ಪತ್ನಿ ಅಲಕಾ ಸಿಂಧೂರ ಅವರಿಗೆ ಅಕ್ಕನ ಬಳಗದ ವತಿಯಿಂದ 'ತ್ರಿವಿಧ ದಾಸೋಹ ರತ್ನ' ಪ್ರಶಸ್ತಿಯನ್ನು ನೀಡಿ ಗೌರವಿಸಲಾಯಿತು.

ಸಮಾರಂಭದಲ್ಲಿ ಅಕ್ಕನಬಳಗದ ಶರಣೆಯರು, ಸಾರ್ವಜನಿಕರು ಪಾಲ್ಗೊಂಡಿದ್ದರು. ಧಾರವಾಡದ ಯುವ ವಾಗ್ಮಿ ಐಶ್ವರ್ಯ ಸೋಲಾರಗೊಪ್ಪ ಕಾರ್ಯಕ್ರಮ ನಿರ್ವಹಿಸಿದರು.

> ನಾನು ಎಂಪಿ ಆಗಲಿ, ಆಗದೆ ಇರಲಿ, ಶಾಸಕ ಇರಲಿ, ಇರದೇ ಇರಲಿ. ಸವಣೂರ-ಶಿಗ್ಗಾವಿ ಜನತೆಯ ಸೇವೆಯನ್ನು ನಿರಂತರವಾಗಿ ಮಾಡುತ್ತೇನೆ. ನನಗೆ ಸ್ಥಾನಕ್ಕಿಂತ ಕಳೆದ 16 ವರ್ಷ ನೀಡಿದ ನಿಮ್ಮ ಪ್ರೀತಿ-ವಿಶ್ವಾಸ ನನ್ನ ಜೀವನದಲ್ಲಿ ಅತ್ಯಂತ ಮಹತ್ವದ ದಿನಗಳಾಗಿವೆ ಎಂಬುದನ್ನು ನಾನೆಂದೂ ಮರೆಯುವದಿಲ್ಲ.
>
> **- ಬಸವರಾಜ ಬೊಮ್ಮಾಯಿ.**
> ಮಾಜಿ ಮುಖ್ಯಮಂತ್ರಿ.

## ವಿದ್ಯೆಗೆ ಜಗತ್ತನ್ನೇ ಆಳುವ ಶಕ್ತಿಯಿದೆ

■ ವಿಜಯಸಾಕ್ಷಿ ಸುದ್ದಿ, ಗದಗ

ಯಾವುದೇ ಒಂದು ದೇಶ ಸರ್ವಾಂಗೀಣ ಅಭಿವೃದ್ಧಿ ಹೊಂದಿ ಶಕ್ತಿಯುವಾಗಿ ಬೆಳೆಯುವಲ್ಲಿ ವಿದ್ಯೆಯು ಪ್ರಮುಖ ಪಾತ್ರ ವಹಿಸುತ್ತದೆ. ದೇಶದ ಕೃಷಿ, ಕೈಗಾರಿಕೆ, ಆರೋಗ್ಯ ಮುಂತಾದ ಕ್ಷೇತ್ರಗಳಲ್ಲಿ ಪ್ರಗತಿಯನ್ನು ಸಾಧಿಸಲು ವಿದ್ಯೆಯೇ ಮುಖ್ಯವಾಗಿದೆ. ಹಾಗಾಗಿ ವಿದ್ಯೆಗೆ ಜಗತ್ತನ್ನು ಆಳುವ ಶಕ್ತಿ ಇದೆ ಎಂದು ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಹೇಳಿದರು.

ಅವರು, ದ್ವಿತೀಯ ಪಿಯುಸಿ ಕಲಾ ವಿಭಾಗದಲ್ಲಿ 600ಕ್ಕೆ 590 ಅಂಕ ಪಡೆದು ರಾಜ್ಯಕ್ಕೆ ಏಳನೇ ಸ್ಥಾನ ಹಾಗೂ ಜಿಲ್ಲೆಗೆ ಪ್ರಥಮ ಸ್ಥಾನ ಪಡೆದ ನಿಮಿತ್ತ ನಾಗಾವಿ ಗ್ರಾಮದ ಪವಿತ್ರ ಹನುಮಂತಪ್ಪ ಹೊಸಳ್ಳಿ ಅವರ ಸ್ವಗೃಹಕ್ಕೆ ತೆರಳಿ



ಸನ್ಮಾನಿಸಿ ಮಾತನಾಡಿದರು.

ಕುರಿ ಕಾಯುವ ಕುಟುಂಬದಲ್ಲಿ ಜನಿಸಿದ ಪವಿತ್ರ ರಾಜ್ಯಮಟ್ಟದ ಸಾಧನೆ ಮಾಡಿದ್ದನ್ನು ನೋಡಿದರೆ ವಿದ್ಯೆ ಎಲ್ಲೆಲ್ಲಿ ಅಡಗಿದೆ ಎಂದು ಹೇಳಲು ಸಾಧ್ಯವಿಲ್ಲ ಎಂದು ಅಭಿಪ್ರಾಯಪಟ್ಟರು. ಇದೇ ಸಂದರ್ಭದಲ್ಲಿ ಸಾಧನೆಗೆ ಕಾರಣೀಕರ್ತರಾದ ವಿದ್ಯಾರ್ಥಿನಿಯ ಪಾಲಕರಾದ ಹನಮಂತಪ್ಪ, ಕಸ್ತೂರೆವ್ವರನ್ನು ಸನ್ಮಾನಿಸಿ ಗೌರವಿಸಿದರು.

ಕಾರ್ಯಕ್ರಮದಲ್ಲಿ ಪ್ರಾಚಾರ್ಯ ಅಶೋಕ್ ಅಂಗಡಿ, ರವಿ ಕುಲಕರ್ಣಿ, ಉಪನ್ಯಾಸಕರಾದ ಎಸ್.ಐ. ಮೇಟಿ, ಎಂ.ಎಸ್. ಮುಲ್ಲಾ, ನಿವೃತ್ತ ಮುಖ್ಯೋಪಾಧ್ಯಾಯ ಎನ್.ವಿ. ಜೋಶಿ, ನಾಗಾವಿ ಗ್ರಾಮದ ಹಿರಿಯರಾದ ಬಸವಣ್ಣಪ್ಪ ಚಿಂಚಲಿ, ಅಲ್ಲಾ ಸಾಬ್ ಪೀರ್ ಖಾನರವರ, ಮಲ್ಲಪ್ಪ ಗೋಲಪ್ಪನವರ, ಡಿ.ವಿ. ಮರಡ್ಡಿ, ಮೈಲಾರಪ್ಪ ತಾಮ್ರಗುಂಡಿ ಮುಂತಾದವರು ಉಪಸ್ಥಿತರಿದ್ದರು.

## ನೇತ್ರದಾನಕ್ಕೆ ಲಯನ್ಸ್ ಕ್ಲಬ್ ಪ್ರೇರಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ನಗರದ ಅಬ್ಬಿಗೇರಿ ಕಂಪೌಂಡ್‌ನ ನಿವಾಸಿ ಶ್ರೀಮತಿ ವಾಲಿಬಾಯಿ ಸೋಹನರಾಜ್ ಜೀರಾವಾಲ (79) ಬುಧವಾರ ಮಧ್ಯಾಹ್ನ ನಿಧನರಾದರು. ಗದಗ-ಬೆಟಗೇರಿ ಲಯನ್ಸ್ ಕ್ಲಬ್ ಪ್ರೇರಣೆಯಿಂದ ಮೃತರ ನೇತ್ರಗಳನ್ನು ಕುಟುಂಬದವರು ದಾನ ಮಾಡಿದರು.

ಲಯನ್ಸ್ ಕ್ಲಬ್ ತಂಡ ಕೈಗೊಂಡ 16ನೇ ನೇತ್ರದಾನ ಇದಾಗಿದೆ. ಮರಣಾ ನಂತರ ನೇತ್ರಗಳನ್ನು ಸುಡದೆ, ಮಣ್ಣು ಮಾಡದೇ ಕುಟುಂಬದವರು ನೇತ್ರದಾನ ಮಾಡಲು ಮುಂದಾದರೆ, ಕಣ್ಣಿಲ್ಲದ ವ್ಯಕ್ತಿಗಳಿಗೆ ಮೃತರ ಕಣ್ಣುಗಳನ್ನು ಕಸಿ ಮಾಡುವ ಮೂಲಕ ಹೊರ ಜಗತ್ತನ್ನು ನೋಡುವಂತೆ ಮಾಡಲು ವೈದ್ಯಕೀಯ ಕ್ಷೇತ್ರದಲ್ಲಿ ಅವಕಾಶಗಳಿದ್ದು, ಮೃತರ ನೇತ್ರಗಳನ್ನು ದಾನ ಮಾಡಲು ಕುಟುಂಬದವರು ಮುಂದೆ ಬರಬೇಕೆಂದು ಕ್ಲಬ್ ಅಧ್ಯಕ್ಷ ರಮೇಶ ಶಿಗ್ಲಿ, ಕಾರ್ಯದರ್ಶಿ ಪ್ರವೀಣ ವಾರಕರ ಸಾರ್ವಜನಿಕರಲ್ಲಿ ಮನವಿ



ಮಾಡಿಕೊಂಡರು.

ಹುಬ್ಬಳ್ಳಿಯ ಎಂ.ಎಂ. ಜೋಶಿ ನೇತ್ರಾಲಯದ ತಜ್ಞರ ತಂಡ ನಗರಕ್ಕೆ ಆಗಮಿಸಿ ನೇತ್ರದಾನದ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಿದರು. ನೇತ್ರದಾನ ಮಾಡಿದ ಕುಟುಂಬದವರನ್ನು ಕ್ಲಬ್ ಪದಾಧಿಕಾರಿಗಳು ಅಭಿನಂದಿಸಿದರು. ಜಯಂತ ಕವಾಡ ಅವರ ಪ್ರೇರಣೆಯಿಂದ ಈ ಕಾರ್ಯ ಸಾಕಾರಗೊಂಡಿತು.

ಈ ಸಂದರ್ಭದಲ್ಲಿ ಪ್ರವೀಣ ಶಹಾ, ಕಮಲೇಶ ಜೈನ್, ರೂಪಚಂದ ಪಾಲರೇಚ, ಶಾಂತಿಲಾಲ ಪಾಲರೇಚ, ಧೀರಜ್ ಪಾಲರೇಚ, ಯಶವಂತ ಪಾಲರೇಚ, ರಾಜು ಪಾಲರೇಚ, ವರ್ಧಮಾನ ಪಾಲರೇಚ ಸೇರಿದಂತೆ ಕ್ಲಬ್‌ನ ಸದಸ್ಯರು, ಕುಟುಂಬದ ಸದಸ್ಯರು ಉಪಸ್ಥಿತರಿದ್ದರು.

## ಸಂಪಾದಕೀಯ

# ಗೋದಿ ಮೀಡಿಯಾ ಸದ್ಬಳಕೆ

ಮಾಧ್ಯಮ ಕೇವಲ ಉದ್ಯಮವಾಗಿ ಬದಲಾಗದೆ ಅದೊಂದು ಮಾರಾಟದ ಸರಕಾಗಿ ಬಳಕೆಯಾಗಿದೆ. ಮಾಧ್ಯಮ ಜನರ ಅಭಿಪ್ರಾಯವನ್ನ ಬದಲಿಸುವ ಸರಕು ಎನ್ನುವುದು ಅರಿತ ಕಾರಣಕ್ಕೆ ಕಳೆದ ಹತ್ತು ವರ್ಷಗಳಲ್ಲಿ ಮಾಧ್ಯಮ ಕ್ಷೇತ್ರ ತನ್ನನ್ನೇ ತಾನು ಮಾರಿಕೊಂಡು, ಅದನ್ನು ಉದ್ಯಮ ಎಂದುಕೊಳ್ಳುತ್ತಿದೆ.

ಗೋದಿ ಮೀಡಿಯಾ ಎಂದು ದೇಶಾದ್ಯಂತ ಚರ್ಚೆಗೆ ಕಾರಣವಾಗಿರುವ ಮಾರಿಕೊಂಡಿರುವ ಮಾಧ್ಯಮ ಸಂಸ್ಥೆಗಳು ಆಡಳಿತ ಪಕ್ಷವನ್ನ ಎಂದಿಗೂ ಪ್ರಶ್ನಿಸಲೇ ಇಲ್ಲ. ಕಳೆದ ಹತ್ತು ವರ್ಷಗಳಲ್ಲಿ ಪ್ರಧಾನಿ ನರೇಂದ್ರ ಮೋದಿ ಒಂದೇ ಒಂದು ಪತ್ರಿಕಾಗೋಷ್ಠಿ ನಡೆಸದಿರುವ ಬಗ್ಗೆ ಒಂದೇ ಒಂದು ಶಬ್ದವನ್ನು ಮಾತಾಡಲಿಲ್ಲ.

ಆದರೆ 2024ರ ಲೋಕಸಭೆ ಚುನಾವಣೆ ಹಲವು ಹಂತಗಳಲ್ಲಿ ನಡೆದಿರುವಾಗ, ಪ್ರಧಾನಿ ಮೋದಿ ಮಾಧ್ಯಮಗಳಿಗೆ ಮಾತನಾಡಲು ಆರಂಭಿಸಿದರು. ಪ್ರಧಾನಿ ಪತ್ರಿಕಾಗೋಷ್ಠಿ ನಡೆಸಿಲ್ಲ ಎಂದು ಅಕ್ಷೇಪ ಎತ್ತಿದ್ದ ಪತ್ರಕರ್ತರನ್ನು ಬಿಟ್ಟು, ಮಾರಿಕೊಂಡ ಮಾಧ್ಯಮ ಸಂಸ್ಥೆಗಳ ಪ್ರತಿನಿಧಿಗಳ ಮುಂದೆ ಮಾತಾಡಿದ್ದಾರೆ.

ಪ್ರಧಾನಿಯೊಬ್ಬರ ಸಂದರ್ಶನ ಎಂದರೆ ಜನರಿಗೆ ಕುತೂಹಲ ಸಹಜ. ಅಲ್ಲಿ ದೇಶದ ಜನರ ಪ್ರಶ್ನೆಗಳಿಗೆ ಉತ್ತರ ಸಿಗುವ ನಿರೀಕ್ಷೆಗಳು ಇರುತ್ತವೆ. ಆದರೆ ಇತ್ತೀಚಿನ ಪ್ರಧಾನಿ ಮೋದಿ ಸಂದರ್ಶನಗಳನ್ನ ನೋಡಿದರೆ, ಸಂದರ್ಶನಗಳನ್ನು ಪೂರ್ವ ನಿಯೋಜಿತವಾಗಿ ಸಂಘಟಿಸಿರುವುದು ಸ್ಪಷ್ಟವಾಗುತ್ತಿದೆ.

ಸಂದರ್ಶಕರು ಪ್ರತಿಪಕ್ಷಗಳ ಟೀಕೆಗಳ ಬಗ್ಗೆ ಪ್ರಶ್ನೆಗಳನ್ನ ಕೇಳಲಿಲ್ಲ, ದೇಶದ ಜನ ನಿಜವಾಗಿಯೂ ಏನು ಬಯಸುತ್ತಿದ್ದಾರೆ ಎನ್ನುವುದನ್ನು ಕೇಳಲಿಲ್ಲ. ಬೆಲೆ ಏರಿಕೆ ನಿಯಂತ್ರಣ ಯಾವಾಗ ಎಂದು ಪ್ರಶ್ನಿಸಲಿಲ್ಲ? ಹಾಗಿದ್ದರೆ ಮಾಧ್ಯಮ ಪ್ರತಿನಿಧಿಗಳು ಪ್ರಶ್ನೆ ಮಾಡಿದ್ದಾದರೂ ಏನು ಎನ್ನುವುದನ್ನು ಸೂಕ್ಷ್ಮವಾಗಿ ಗಮನಿಸೋಣ.

ಪ್ರಧಾನಿ ಮೋದಿ ಚುನಾವಣೆ ಪ್ರಚಾರಗಳಿಗೆ ಹೋದಲ್ಲೆಲ್ಲ ಯಾವ ಮಾತುಗಳು ಒಂದಷ್ಟು ವಿವಾದಗಳಿಗೆ ಕಾರಣವಾಗಿದೆಯೋ ಅದೇ ಮಾತುಗಳನ್ನ ಗೋದಿ ಮೀಡಿಯಾದ ಪ್ರತಿನಿಧಿಗಳು ಪ್ರಶ್ನಿಸಿದ್ದಾರೆ.

ಈ ರೀತಿಯ ಪ್ರಶ್ನೆಗಳು ಹುಟ್ಟಿಕೊಳ್ಳಲು ಕಾರಣವೇನೆಂದರೆ, ಯಾವ ಮಾತುಗಳಿಂದ ವಿವಾದಕ್ಕೆ ಕಾರಣವಾಗಿದೆಯೋ ಅದಕ್ಕೆ ಸ್ಪಷ್ಟನೆ ನೀಡಲು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಒಂದು ವೇದಿಕೆ ಬೇಕಾಗಿತ್ತು. ಅದನ್ನು ಮೀಡಿಯಾ ಮೂಲಕ ಅವರೇ ಸೃಷ್ಟಿಕೊಂಡಿರುವುದು ಸ್ಪಷ್ಟವಾಗಿದೆ.

ಪ್ರಧಾನಿಯವರ ಇತ್ತೀಚಿನ ಎಲ್ಲ ಸಂದರ್ಶನಗಳನ್ನ ನೋಡಿದಾಗ ಜನಸಾಮಾನ್ಯರಿಗೂ ಇದು ಸುಲಭವಾಗಿ ಅರ್ಥವಾಗುತ್ತದೆ. ಪ್ರಧಾನಿ ಮೋದಿ ಮಾಧ್ಯಮಗಳ ಮೂಲಕ ಜನರ ಜೊತೆ ಮಾತನಾಡುವ ಇಚ್ಛೆ ಹೊಂದಿದ್ದರೆ ನೇರ ಸಂದರ್ಶನ ಏರ್ಪಡಿಸಲಿ. ಪತ್ರಕರ್ತರ, ಜನಸಾಮಾನ್ಯರ ಪ್ರಶ್ನೆಗಳಿಗೆ ಉತ್ತರ ನೀಡಲಿ. ಕಳೆದ ಹತ್ತು ವರ್ಷಗಳಲ್ಲಿ ಉತ್ತಮ ಆಡಳಿತ ನೀಡಿರುವ ವಿಶ್ವಾಸವಿದ್ದರೆ ಒಮ್ಮೆಯಾದರೂ ಬಹಿರಂಗ ಚರ್ಚೆಗೆ ಪ್ರಧಾನಿ ಮುಂದಾಗಲಿ.

## ವಿಸ್ತೃತ ಯೋಜನೆ ವರದಿ ಸಿದ್ಧಪಡಿಸಿ ಸಮಸ್ಯೆ ಇತ್ಯರ್ಥ: ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ

# ರಾಜ ಕಾಲುವೆ ಸಮಸ್ಯೆ ಇತ್ಯರ್ಥಕ್ಕೆ ಕ್ರಮ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಹುಬ್ಬಳ್ಳಿ ನಗರದಲ್ಲಿರುವ ರಾಜ ಕಾಲುವೆ ಬಗ್ಗೆ ಸಂಪೂರ್ಣ ಮಾಹಿತಿಯನ್ನು ಅಧಿಕಾರಿಗಳಿಂದ ಪಡೆದುಕೊಂಡು, ಸಮಸ್ಯೆ ಇತ್ಯರ್ಥಕ್ಕೆ ಕ್ರಮ ಕೈಗೊಳ್ಳಲಾಗುವುದು. ಈ ಕುರಿತು ವಿಸ್ತೃತ ಯೋಜನಾ ವರದಿ ಸಿದ್ಧಪಡಿಸಿ ಅಲ್ಪಾವಧಿ ಹಾಗೂ ದೀರ್ಘಾವಧಿ ಪರಿಹಾರ ಕಾಮಗಾರಿಗಳನ್ನು ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿಗಳಾದ ದಿವ್ಯಪ್ರಭು ಜಿ.ಆರ್.ಜೆ ಹೇಳಿದರು.



ಬುಧವಾರ ಹುಬ್ಬಳ್ಳಿಯ ವಿವಿಧ ಮಳೆ ಪ್ರವಾಹ ಪ್ರದೇಶಗಳಿಗೆ ಭೇಟಿ ನೀಡಿ, ಪರಿಶೀಲನೆ ನಡೆಸಿದ ಬಳಿಕ ಅವರು ಮಾಧ್ಯಮದವರೊಂದಿಗೆ ಮಾತನಾಡಿ, ಜಿಲ್ಲೆಯಾದ್ಯಂತ ಉತ್ತಮ ಮಳೆಯಾಗಿದೆ. ಮುಂದಿನ ವಾರದಲ್ಲಿ ಹೆಚ್ಚಿನ ಮಳೆಯಾಗುವ ಸಾಧ್ಯತೆಗಳಿವೆ. ಅಲ್ಲದೇ ಮುಂಗಾರು ಮಳೆಯು ವಾಡಿಕೆಗಿಂತ ಹೆಚ್ಚಾಗಲಿದೆ. ಈಗಾಗಲೇ ಪೂರ್ವ ಮುಂಗಾರು ಮಳೆ ಸಿದ್ಧತಾ ಹಾಗೂ ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ. ನಗರ ಪ್ರದೇಶಗಳಲ್ಲಿ ಹೆಚ್ಚಿನ ಮಳೆಯಾದರೆ ಸಮಸ್ಯೆಗಳು ಉಲ್ಬಣವಾಗುತ್ತಿವೆ. ಅವುಗಳನ್ನು ತುರ್ತಾಗಿ ಪರಿಹರಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ತಿಳಿಸಲಾಗಿದೆ ಎಂದರು.

ನಗರ ಪ್ರದೇಶದಲ್ಲಿರುವ ಎಲ್ಲಾ ಚರಂಡಿ, ಒಳ ಚರಂಡಿ ಮತ್ತು ರಾಜ ಕಾಲುವೆಯನ್ನು ಸ್ವಚ್ಛಗೊಳಿಸುವಂತೆ ಪಾಲಿಕೆ ಅಧಿಕಾರಿಗಳಿಗೆ ತಿಳಿಸಲಾಗಿದೆ. ಯಾವುದೇ ರೀತಿಯಲ್ಲಿ ಹೂಳು ತುಂಬಿಕೊಳ್ಳದಂತೆ ಕ್ರಮ ವಹಿಸಬೇಕು. ಅಲ್ಲದೇ ಸಾರ್ವಜನಿಕರು ಕಸ, ತ್ಯಾಜ್ಯ ವಸ್ತುಗಳು, ಅನಗತ್ಯ ವಸ್ತುಗಳನ್ನು ರಾಜ ಕಾಲುವೆಗೆ ಎಸೆಯಬಾರದು. ಅದರ ಬದಲಿಗೆ ಪಾಲಿಕೆಯ ತ್ಯಾಜ್ಯ ಸಂಗ್ರಹ ವಾಹನಕ್ಕೆ ಹಾಕಬೇಕು. ಇದರಿಂದ ರಾಜ ಕಾಲುವೆಯಲ್ಲಿ ತ್ಯಾಜ್ಯ ತುಂಬಿಕೊಂಡು ನೀರು ತಗ್ಗು ಪ್ರದೇಶಗಳಿಗೆ ನುಗ್ಗುವುದು ತಪ್ಪುತ್ತದೆ.

ಮಳೆಯಿಂದ ಯಾವುದೇ ಜೀವ ಹಾನಿ ಆಗಬಾರದು ಎಂಬುದು ನಮ್ಮ ಉದ್ದೇಶವಾಗಿದೆ. ಈ ನಿಟ್ಟಿನಲ್ಲಿ ಅಧಿಕಾರಿಗಳ ಸಭೆ ನಡೆಸಲಾಗುವುದು. ತುರ್ತು ಸ್ಪಂದನಾ ತಂಡ ರಚಿಸಲಾಗುವುದು. ತಂಡವು ಮುಂದಿನ ದಿನಗಳಲ್ಲಿ ಕಾರ್ಯನಿರ್ವಹಿಸಲಿದೆ. ನಗರ ಪ್ರದೇಶದ ರಸ್ತೆಯ ಬದಿಗಳಲ್ಲಿರುವ ಅಪಾಯಕಾರಿ ಮರ ಹಾಗೂ ಮರದ ಕೊಂಬೆಗಳನ್ನು ತೆರವುಗೊಳಿಸಲಾಗುವುದು. ಅರಣ್ಯ ಇಲಾಖೆಯೊಂದಿಗೆ ಸಮನ್ವಯ ಸಾಧಿಸಿ, ತ್ವರಿತಗತಿಯಲ್ಲಿ ಜೀವಹಾನಿ ಉಂಟು ಮಾಡುವ ಮರಗಳನ್ನು ತೆರವುಗೊಳಿಸಲಾಗುತ್ತದೆ. ಹೆಸ್ಕಾಂ ಇಲಾಖೆ ಅಧಿಕಾರಿಗಳೊಂದಿಗೆ ಚರ್ಚಿಸಿ, ಬೀಳುವಂತಹ ವಿದ್ಯುತ್ ಕಂಬಗಳನ್ನು ತೆರವು ಮಾಡಲಾಗುವುದು. ಅಲ್ಲದೇ ಅಪಾಯಕಾರಿಯಾಗುವ ರೀತಿಯಲ್ಲಿರುವ ವಿದ್ಯುತ್ ತಂತಿಗಳನ್ನು ಹಾಕದಂತೆ ತಿಳಿಸಲಾಗುವುದು ಎಂದು ಅವರು ಮಾಹಿತಿ ನೀಡಿದರು.

ಇದಕ್ಕೂ ಮುನ್ನ ಮೇದಾರ ಓಣಿ, ತುಳಜಾ ಭವಾನಿ ವೃತ್ತ, ಕಮರಿಪೇಟೆ ಪೊಲೀಸ್ ಠಾಣೆ, ಹಳೆ ಹುಬ್ಬಳ್ಳಿ ಸೇತುವೆ ಹಾಗೂ ಗಬ್ಬೂರು ಸರ್ವೀಸ್ ರೋಡ್ ಕೆಳ ಹಂತದ ಸೇತುವೆಗಳಿಗೆ ಜಿಲ್ಲಾಧಿಕಾರಿಗಳು ಭೇಟಿ ನೀಡಿ, ವೀಕ್ಷಣೆ ಮಾಡಿದರು. ಈ ಸಂದರ್ಭದಲ್ಲಿ ಹುಬ್ಬಳ್ಳಿ ಧಾರವಾಡ ಪಾಲಿಕೆ ಆಯುಕ್ತರಾದ ಡಾ.ಈಶ್ವರ ಉಳ್ಳಾಗಡ್ಡಿ, ಹುಬ್ಬಳ್ಳಿ ಶಹರ ತಹಸೀಲ್ದಾರ ಕಲಗೌಡ ಪಾಟೀಲ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸಾರ್ವಜನಿಕರು ಉಪಸ್ಥಿತರಿದ್ದರು.

ಕೆಲವು ಕಡೆಗಳಲ್ಲಿ ಮ್ಯಾನ್‌ಹೋಲ್‌ಗಳು ತೆರೆದುಕೊಂಡಿರುವುದು ಗಮನಕ್ಕೆ ಬಂದಿವೆ. ಹೀಗಾಗಿ ಮುಂದಿನ ದಿನಗಳಲ್ಲಿ ಮ್ಯಾನ್‌ಹೋಲ್‌ಗಳನ್ನು ಮುಚ್ಚುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಗುವುದು. ಪ್ರತಿ ವಾರ್ಡ್ ಹಂತದಲ್ಲಿ ಸ್ವಚ್ಛತೆ ಬಗ್ಗೆ ಪ್ರಚಾರ ಮಾಡಬೇಕಾಗಿದೆ. ಮೇದಾರ ಓಣಿಯಲ್ಲಿನ ತಗ್ಗು ಪ್ರದೇಶಗಳಿಗೆ ಮಳೆ ನೀರು ನುಗ್ಗುವುದರ ಕುರಿತು ಸಾರ್ವಜನಿಕರಿಂದ ಮಾಹಿತಿ ಪಡೆದುಕೊಳ್ಳಲಾಗಿದೆ. ಈ ಕುರಿತು ಸಂಬಂಧಪಟ್ಟ ಅಧಿಕಾರಿಗಳು, ಅಂಗಡಿ ಮಾಲೀಕರ ಜೊತೆ ಚರ್ಚಿಸಿ, ಪರಿಹಾರ ಕ್ರಮಗಳನ್ನು ಕೈಗೊಳ್ಳಲಾಗುತ್ತದೆ ಎಂದರು.



## ಮೋದಿ ಜನರ ಕಷ್ಟಗಳನ್ನು ಕೇಳದೆ, ಅಪ್ರಸ್ತುತ ವಿಷಯಗಳ ಬಗ್ಗೆ ಮಾತನಾಡುತ್ತಿದ್ದಾರೆ: ಪ್ರಿಯಾಂಕ ಗಾಂಧಿ



■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಪ್ರಧಾನಿ ನರೇಂದ್ರ ಮೋದಿ ಜನರ ಕಷ್ಟಗಳನ್ನು ಕೇಳುತ್ತಿಲ್ಲ, ಅಪ್ರಸ್ತುತ ವಿಷಯಗಳನ್ನು ಮಾತನಾಡುತ್ತಿದ್ದಾರೆ ಎಂದು ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕಾ ಗಾಂಧಿ ವಾದ್ರಾ ವಾಗ್ದಾಳಿ ನಡೆಸಿದ್ದಾರೆ.

ಅಮೇಥಿಯ ಕಾಂಗ್ರೆಸ್ ಅಭ್ಯರ್ಥಿ ಕಿಶೋರಿ ಲಾಲ್ ಶರ್ಮಾ ಪರ ಮೊಹಿಯಾ ಕೇಸರಿಯಾದಲ್ಲಿ ಆಯೋಜಿಸಿದ್ದ ಚುನಾವಣಾ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಪ್ರಿಯಾಂಕಾ ಗಾಂಧಿ, ಪ್ರಧಾನಿ ಜನರನ್ನು ಪ್ರೀತಿಸುತ್ತಿಲ್ಲ ಮತ್ತು ಯಾವುದೇ ರೈತರ ಮನೆಗೆ ಭೇಟಿ ನೀಡಿಲ್ಲ. ನಿನ್ನೆ ವಾರಣಾಸಿಯಲ್ಲಿ ರೋಡ್ ಶೋ ನಡೆಸಿದ್ದರು. ಎತ್ತರದ ವಾಹನದ ಮೇಲೆ ನಿಂತು ಭದ್ರತಾ ಸಿಬ್ಬಂದಿ ನಡುವೆ ನಿಂತು ಕೈ ಬೀಸಿದರು. ನಿಮ್ಮ ದುಃಖ ಏನೆಂದು ಅವರಿಗೆ ಹೇಗೆ ತಿಳಿಯುತ್ತದೆ? ಅವರು ಯಾವಾಗಲು ಉದ್ಯಮಿಗಳ ಜೊತೆ ಇರುತ್ತಾರೆ ಎಂದು ಹೇಳಿದ್ದಾರೆ.

ಮೋದಿ ಎಂದಿಗೂ ಜನರ ಕಷ್ಟಗಳನ್ನು ಕೇಳುವುದಿಲ್ಲ. ರಾಹುಲ್ ಗಾಂಧಿ ದೇಶವಾಸಿಗಳ ಸಮಸ್ಯೆಗಳನ್ನು ಆಲಿಸಲು ಕಾಶ್ಮೀರದಿಂದ ಕನ್ಯಾಕುಮಾರಿಯವರೆಗೆ 4,000 ಕಿಲೋಮೀಟರ್ ಪಾದಯಾತ್ರೆ ನಡೆಸಿದರು. ದೇಶದ ಅತ್ಯುನ್ನತ ಹುದ್ದೆಯಲ್ಲಿರುವ ಪ್ರಧಾನಿಯಂತಹ ವ್ಯಕ್ತಿ ದೇಶದ ಜನರನ್ನು ಪ್ರೀತಿಸುವುದಿಲ್ಲ. ಚುನಾವಣಾ ಪ್ರಚಾರದ ವೇಳೆ ಬಂದಿದ್ದರೆ 10 ವರ್ಷದಲ್ಲಿ ಏನು ಮಾಡಿದ್ದಾರೆ ಎನ್ನುವುದನ್ನಾದರೂ ಹೇಳಬೇಕು. ಅವರು ನಿಮ್ಮೊಂದಿಗೆ ಅಪ್ರಸ್ತುತ ವಿಷಯಗಳನ್ನು ಮಾತನಾಡುತ್ತಿದ್ದಾರೆ. ಚುನಾವಣೆಯ ಸಮಯದಲ್ಲಿ ಎಮ್ಮೆಗಳು, ಮಂಗಳಸೂತ್ರಗಳು ಮತ್ತು ದೇವಸ್ಥಾನಗಳು ಮತ್ತು ಮಸೀದಿಗಳ ಬಗ್ಗೆ ಕೇಳಲು ಬಯಸುವುದಿಲ್ಲ ಎಂದು ಜನರು ಧ್ವನಿ ಎತ್ತಬೇಕು. ಜನರಿಗಿರುವ ಸಮಸ್ಯೆಗಳಿಗೆ ಪರಿಹಾರದ ಬಗ್ಗೆ ಮಾತನಾಡುವಂತೆ ಪ್ರಧಾನಿಗೆ ತಿಳಿಸುವಂತೆ ಅವರು ಕೇಳಿಕೊಂಡಿದ್ದಾರೆ.

ನೀವು ಜಾಗೃತರಾದರೆ, ಅವರು ಅಸಹಾಯಕರಾಗುತ್ತಾರೆ. ದೇಶದಲ್ಲಿ ಅದ್ಭುತ ರಾಜಕೀಯ ನಡೆಯುತ್ತಿದೆ. ಪ್ರಧಾನಿ ಮತ್ತು ಅಮೇಥಿ ಸಂಸದೆ ಸ್ಮೃತಿ ಇರಾನಿ ಸೇರಿದಂತೆ ಬಿಜೆಪಿ ನಾಯಕರು ಸಾರ್ವಜನಿಕರ ಜೊತೆ ನಮಗೆ ಯಾವುದೇ ಹೊಣೆಗಾರಿಕೆ ಇಲ್ಲ ಎಂದು ಭಾವಿಸುತ್ತಾರೆ. ಅವರು ಧರ್ಮದ ಆಧಾರದ ಮೇಲೆ ಮತವನ್ನು ಪಡೆಯುವುದಾಗಿ ಭಾವಿಸುತ್ತಾರೆ ಎಂದು ಹೇಳಿದ್ದಾರೆ.

ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರನ್ನು ಶ್ಲಾಘಿಸಿದ ಪ್ರಿಯಾಂಕಾ ಗಾಂಧಿ, ರಾಜೀವ್ ಗಾಂಧಿ ಮಾತ್ರವಲ್ಲ, ಬಿಜೆಪಿಯ ಅಟಲ್ ಬಿಹಾರಿ ವಾಜಪೇಯಿ ಕೂಡ ಸಭ್ಯ ಮನುಷ್ಯರಾಗಿದ್ದರು. ಅವರಿಗೆ ಜನರ ಬಗ್ಗೆ ಗೌರವವಿತ್ತು. ಜನರ ಕಡೆಗೆ ಸ್ವಲ್ಪ ಉತ್ತರದಾಯಿತ್ವವಿದೆ ಮತ್ತು ಕೆಲವು ಕೆಲಸಗಳನ್ನು ಮಾಡಬೇಕಾಗಿದೆ ಎಂದು ಅವರು ಅರ್ಥಮಾಡಿಕೊಂಡಿದ್ದರು. ಮೋದಿ ಅವರು ರೈತರಿಗೆ ಏನು ಮಾಡಿದ್ದಾರೆ ಎಂದು ಹೇಳಲು ಸಾಧ್ಯವಿಲ್ಲ. ಅಲ್ಲೊಂದು ಇಲ್ಲೊಂದು ಮಾತನಾಡುತ್ತಾ ಜನರ ಗಮನವನ್ನು ಬೇರೆಡೆಗೆ ಸೆಳೆಯುತ್ತಿದ್ದಾರೆ ಎಂದು ಹೇಳಿದ್ದಾರೆ.

ಮೋದಿ ವಿರುದ್ಧ ಭ್ರಷ್ಟಾಚಾರದ ಆರೋಪಗಳನ್ನು ಹೊರಿಸಿದ ಪ್ರಿಯಾಂಕಾ ಗಾಂಧಿ, ಅವರು ಚುನಾವಣಾ ಬಾಂಡ್‌ಗಳ ಅತಿದೊಡ್ಡ ಭ್ರಷ್ಟಾಚಾರ ಯೋಜನೆಯನ್ನು ತಂದರು, ಇದರಲ್ಲಿ ದೇಣಿಗೆ ನೀಡುವ ವ್ಯಕ್ತಿಯ ಹೆಸರು ರಹಸ್ಯವಾಗಿರುತ್ತಿತ್ತು ಎಂದು ಹೇಳಿದ್ದಾರೆ.

# ಗಾಝಾದಲ್ಲಿ ಭಾರತೀಯ ಸೇನಾ ನಿವೃತ್ತ ಅಧಿಕಾರಿಯನ್ನು ಹತ್ಯೆ ಮಾಡಿದ ಇಸ್ರೇಲ್

■ವಿಜಯಸಾಕ್ಷಿ ಸುದ್ದಿ, ಗಾಝಾ

ರಫಾದಲ್ಲಿ ಇಸ್ರೇಲ್ ನಡೆಸಿದ ದಾಳಿಯಲ್ಲಿ ಭಾರತೀಯ ಸೇನಾ ನಿವೃತ್ತ ಅಧಿಕಾರಿ ಕರ್ನಲ್ ವೈಭವ್ ಅನಿಲ್ ಕಾಳೆ ಮೃತಪಟ್ಟಿದ್ದು, ಇಸ್ರೇಲ್ ಗಾಝಾದಲ್ಲಿ ನಡೆಸುತ್ತಿರುವ ಹತ್ಯಾಕಾಂಡಕ್ಕೆ ಮೊದಲ ಬಾರಿಗೆ ಭಾರತೀಯನೋರ್ವ ಬಲಿಯಾಗಿದ್ದಾರೆ.



ವಿಶ್ವಸಂಸ್ಥೆಯ ಸುರಕ್ಷತೆ ಮತ್ತು ಭದ್ರತಾ ಇಲಾಖೆಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ಭಾರತೀಯ ಸೇನೆಯ ನಿವೃತ್ತ ಕರ್ನಲ್ ವೈಭವ್ ಅನಿಲ್ ಕಾಳೆ (46) ಮೃತರು. ಇವರು ವಿಶ್ವಸಂಸ್ಥೆಯ ವಾಹನದಲ್ಲಿ ರಾಫಾದಲ್ಲಿರುವ ಯುರೋಪಿಯನ್ ಆಸ್ಪತ್ರೆಗೆ ಪ್ರಯಾಣಿಸುತ್ತಿದ್ದಾಗ ಇಸ್ರೇಲ್ ನಡೆಸಿದ ದಾಳಿಯಲ್ಲಿ ಸಾವನ್ನಪ್ಪಿದ್ದಾರೆ.

ಯುನೈಟೆಡ್ ನೇಷನ್ಸ್ ಡಿಪಾರ್ಟ್ಮೆಂಟ್ ಆಫ್ ಸೇಫ್ಟಿ ಅಂಡ್ ಸೆಕ್ಯುರಿಟಿ (ಡಿಎಸ್‌ಎಸ್) ನ ಸಿಬ್ಬಂದಿ ಸದಸ್ಯರಾಗಿರುವ ಅವರು ಪತ್ನಿ ಮತ್ತು ಇಬ್ಬರು ಪುತ್ರಿಯರನ್ನು ಅಗಲಿದ್ದಾರೆ. ಅವರ ಕುಟುಂಬ ಪುಣೆಯಲ್ಲಿ ವಾಸಿಸುತ್ತಿದೆ. ಘಟನೆಯಲ್ಲಿ ಕಾಳೆ ಜತೆಗಿದ್ದ ಮತ್ತೋರ್ವ ಡಿಎಸ್‌ಎಸ್ ಸಿಬ್ಬಂದಿ ಕೂಡ ಗಾಯಗೊಂಡಿದ್ದಾರೆ.

2022ರಲ್ಲಿ ಸೈನ್ಯದಿಂದ ನಿವೃತ್ತರಾದ ಅನಿಲ್ ಕಾಳೆ ಎರಡು ತಿಂಗಳ ಹಿಂದೆ ಯುಎನ್‌ಡಿಎಸ್‌ಎಸ್‌ಗೆ ಭದ್ರತಾ ಸಮನ್ವಯ ಅಧಿಕಾರಿಯಾಗಿ ಸೇರಿಕೊಂಡಿದ್ದರು ಮತ್ತು ಒಂದು ತಿಂಗಳ ಹಿಂದೆ ಗಾಝಾಗೆ ತೆರಳಿದ್ದರು. ವಿಶ್ವಸಂಸ್ಥೆಯ ವಾಹನದಲ್ಲಿ ನಾಮಫಲಕವಿದ್ದರೂ ದಾಳಿ ನಡೆಸಲಾಗಿದೆ. ಹಮಾಸ್–ಇಸ್ರೇಲ್ ಯುದ್ಧ ಘೋಷಣೆ ಬಳಿಕ ಸಂಭವಿಸಿದ ಜಾಗತಿಕ ಸಂಸ್ಥೆಯ ಮೊಟ್ಟಮೊದಲ ಅಂತರಾಷ್ಟ್ರೀಯ ಯೋಧನ ಸಾವು ಇದಾಗಿದೆ.

ಈ ದಾಳಿಯನ್ನು ತೀವ್ರವಾಗಿ ಖಂಡಿಸಿರುವ ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಆಂಟೋನಿಯೋ ಗುಟೆರಸ್, ಈ ಬಗ್ಗೆ ಸಮಗ್ರ ತನಿಖೆ ನಡೆಸಲಾಗುವುದು. ಮಾನವೀಯ ಕಾರ್ಯಕರ್ತರನ್ನು ರಕ್ಷಿಸಬೇಕು ಎಂದು ಹೇಳಿದ್ದಾರೆ.


ಅನಿಲ್ ಕಾಳೆ ಎರಡು ದಶಕಗಳಿಗೂ ಹೆಚ್ಚು ಕಾಲ ಮಿಲಿಟರಿ ಪಡೆಯಲ್ಲಿ ಕೆಲಸ ನಿರ್ವಹಿಸಿದ್ದರು. ಭಾರತೀಯ ಸೇನಾ ಅಕಾಡೆಮಿಯಲ್ಲಿ ಉತ್ತೀರ್ಣರಾದ ಬಳಿಕ 11 ಜಮ್ಮು & ಕಾಶ್ಮೀರ ರೈಫಲ್‌ನಲ್ಲಿ ನಿಯೋಜಿತರಾದ ಕಾಳೆ, ಕಾಶ್ಮೀರ ಮತ್ತು ಈಶಾನ್ಯ ಭಾರತ ಸೇರಿದಂತೆ ದೇಶದ ವಿವಿಧೆಡೆ ಸೇವೆ ಸಲ್ಲಿಸಿದ್ದರು. 2022ರಲ್ಲಿ ಅವಧಿಪೂರ್ವ ನಿವೃತ್ತಿ ಪಡೆದಿದ್ದರು.

ಇಸ್ರೇಲ್– ಗಾಝಾ ಮೇಲೆ ಕಳೆದ 8 ತಿಂಗಳಿನಿಂದ ದಾಳಿಯನ್ನು ನಡೆಸುತ್ತಿದ್ದು, ಮೃತರ ಸಂಖ್ಯೆ 35,000 ದಾಟಿ–ದೆ. ಗಾಝಾದಲ್ಲಿ ಹತ್ಯಾಕಾಂಡ ಮುಂದುವರಿಸಿರುವ ಇಸ್ರೇಲ್, ಗಾಝಾದ ನಿರಾಶ್ರಿತರು ಆಶ್ರಯವನ್ನು ಪಡೆದುಕೊಂಡಿರುವ ರಫಾ ಮೇಲೆ ದಾಳಿಯನ್ನು ನಡೆಸುತ್ತಿದೆ. ಗಾಝಾದ ಉತ್ತರ ಪ್ರಾಂತವನ್ನು ಮರಳಿ ವಶಪಡಿಸಿಕೊಳ್ಳುವ ಜೊತೆಗೆ ದಕ್ಷಿಣ ಗಾಝಾದ ರಫಾ ನಗರದ ಮೇಲೆ ಆಕ್ರಮಣ ನಡೆಸುವ ಜಂಟಿ ಕಾರ್ಯಾಚರಣೆಯನ್ನು ಇಸ್ರೇಲ್ ತೀವ್ರಗೊಳಿಸಿದೆ.

ರಫಾ ನಗರವನ್ನು ಸಂಪರ್ಕಿಸುವ ಹೆದ್ದಾರಿಯಲ್ಲಿ ಇಸ್ರೇಲ್‌ನ ಯುದ್ಧಟ್ಯಾಂಕ್‌ಗಳಿದ್ದು, ಇಸ್ರೇಲ್ ಆಕ್ರಮಣ ಮುಂದುವರಿಯುತ್ತಿದೆ ಎಂದು ವರದಿ ಹೇಳಿದೆ. ಗಾಝಾದ ಉತ್ತರ ಮತ್ತು ದಕ್ಷಿಣ ಪ್ರದೇಶಗಳಲ್ಲಿ ಸಾವಿರಾರು ಫೆಲೆಸ್ತೀನಿಯರು ಅತಂತ್ರ ಸ್ಥಿತಿಯಲ್ಲಿದ್ದು ಮಾನವೀಯ ಬಿಕ್ಕಟ್ಟು ಮತ್ತಷ್ಟು ಹದಗೆಡಲಿದೆ ಎಂದು ವಿಶ್ವಸಂಸ್ಥೆ ಎಚ್ಚರಿಸಿವೆ.

## ‘ಯುಎಪಿಎ’ಯಡಿ ಪ್ರಬೀರ್ ಪುರಕಾಯಸ್ಥ ಬಂಧನ ಅಸಿಂಧು: ತಕ್ಷಣ ಬಿಡುಗಡೆಗೆ ಸುಪ್ರೀಂಕೋರ್ಟ್ ಆದೇಶ

■ವಿಜಯಸಾಕ್ಷಿ ಸುದ್ದಿ, ನವದೆಹಲಿ



ನ್ಯೂಸ್‌ಕ್ಲಿಕ್ ಸಂಸ್ಥಾಪಕ ಪ್ರಬೀರ್ ಪುರ್ಕಾಯಸ್ಥ ಅವರನ್ನು ಭಯೋತ್ಪಾದನಾ ನಿಗ್ರಹ ಕಾನೂನಿನಡಿಯಲ್ಲಿ ಬಂಧಿಸಿರುವುದನ್ನು ಸುಪ್ರೀಂಕೋರ್ಟ್ ಬುಧವಾರ ಅಸಿಂಧು ಎಂದು ಘೋಷಿಸಿದ್ದು, ಅವರನ್ನು ತಕ್ಷಣ ಕಸ್ಟಡಿಯಿಂದ ಬಿಡುಗಡೆ ಮಾಡುವಂತೆ ಸೂಚಿಸಿದೆ.

ನ್ಯಾಯಮೂರ್ತಿಗಳಾದ ಬಿ ಆರ್ ಗವಾಯಿ ಮತ್ತು ಸಂದೀಪ್ ಮೆಹ್ತಾ ಅವರ ಪೀಠವು ಈ ಆದೇಶ ಹೊರಡಿಸಿದೆ. ಪಂಕಜ್ ಬನ್ಸಾಲ್ ಪ್ರಕರಣದ ನಂತರ ಮೇಲ್ಮನವಿದಾರರು ಬಂಧನದಿಂದ ಬಿಡುಗಡೆಗೆ ಅರ್ಹನಾಗಿದ್ದಾನೆ. ರಿಮಾಂಡ್ ಆದೇಶ ಅಸಿಂಧು ಎಂದು ನ್ಯಾಯಮೂರ್ತಿ ಮೆಹ್ತಾ ಹೇಳಿದ್ದಾರೆ. ಪಂಕಜ್ ಬನ್ಸಾಲ್ ಪ್ರಕರಣದಲ್ಲಿ ಮಾರ್ಚ್‌ನಲ್ಲಿ ನೀಡಿದ ತೀರ್ಪಿನಲ್ಲಿ ಆರೋಪಿಗಳಿಗೆ ಲಿಖಿತವಾಗಿ ಬಂಧನದ ಬಗ್ಗೆ ಮಾಹಿತಿ ಒದಗಿಸಬೇಕು ಎಂದು ಸುಪ್ರೀಂಕೋರ್ಟ್ ಹೇಳಿದೆ.

ಚೀನಾ ಪರ ಪ್ರಚಾರ ಮಾಡಲು ಹಣ ಪಡೆಯಲಾಗಿದೆ ಎಂದು ನ್ಯೂಸ್‌ಕ್ಲಿಕ್ ವಿರುದ್ಧ ನ್ಯೂಯಾರ್ಕ್ ಟೈಮ್ಸ್ ತನಿಖೆ ಆಪಾದಿಸಿದ ಕೆಲವು ದಿನಗಳ ನಂತರ, ಭಯೋತ್ಪಾದನಾ–ವಿರೋಧಿ ಕಾನೂನು, ಕಾನೂನುಬಾಹಿರ ಚಟುವಟಿಕೆಗಳ ತಡೆಗ ಟ್ಟುವಿಕೆ ಕಾಯಿದೆಯಡಿಯಲ್ಲಿ ಪ್ರಬೀರ್ ಪುರ್ಕಾಯಸ್ಥ ಅವರನ್ನು ಅಕ್ಟೋಬರ್ 3ರಂದು ಬಂಧಿಸಲಾಗಿತ್ತು.

## ಇನ್ಫೋಸಿಸ್‌ಗೆ ಭಾರೀ ದಂಡ ವಿಧಿಸಿದ ಕೆನಡಾದ ಜಸ್ಟಿನ್ ಟ್ರುಡೊ ಸರಕಾರ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಭಾರತೀಯ ಐಟಿ ಕಂಪನಿ ಇನ್ಫೋಸಿಸ್‌ಗೆ ಕೆನಡಾದ ಜಸ್ಟಿನ್ ಟ್ರುಡೊ ಸರಕಾರ 1.34 ಲಕ್ಷ ಕೆನಡಾ ಡಾಲರ್ ಗಿಂತ ಹೆಚ್ಚಿನ ದಂಡವನ್ನು ವಿಧಿಸಿದ್ದು, ಕಂಪೆನಿ ವಿರುದ್ಧ ಆರೋಗ್ಯ ತೆರಿಗೆ ಕಡಿಮೆ ಪಾವತಿಸಿರುವ ಆರೋಪ ಮಾಡಲಾಗಿದೆ.

2020ರಲ್ಲಿ ಉದ್ಯೋಗಿಗಳ ಆರೋಗ್ಯ ತೆರಿಗೆಯನ್ನು ಕಡಿಮೆ ಪಾವತಿಸಿದ ಕಾರಣ ಇನ್ಫೋಸಿಸ್ ಮೇಲೆ ದಂಡವನ್ನು ವಿಧಿಸಲಾಗಿದೆ ಎಂದು ಕೆನಡಾ ಸರ್ಕಾರ ಹೇಳಿಕೊಂಡಿದೆ. ವರದಿಯ ಪ್ರಕಾರ, ಬೆಂಗಳೂರು ಮೂಲದ ಇನ್ಫೋಸಿಸ್ ಕಳೆದ ವಾರ ಕೆನಡಾದ ಹಣಕಾಸು ಸಚಿವಾಲಯದಿಂದ ಆದೇಶವನ್ನು ಸ್ವೀಕರಿಸಿದೆ. ಕಂಪನಿಯ ಮೇಲೆ 1,34,822.38 ಕೆನಡಿಯನ್ ಡಾಲರ್‌ಗಳ ದಂಡವನ್ನು ವಿಧಿಸಲಾಗಿದೆ ಎಂದು ಆದೇಶದಲ್ಲಿ ಉಲ್ಲೇಖಿಸಲಾಗಿದೆ.

ಕೆನಡಾ ದಂಡ ವಿಧಿಸಿರುವ ಬಗ್ಗೆ ಪ್ರತಿಕ್ರಿಯಿಸಿದ ಇನ್ಫೋಸಿಸ್, ದಂಡವು ಕಂಪನಿಯ ಹಣಕಾಸು ಮತ್ತು ಇತರ ಕಾರ್ಯ ಚಟುವಟಿಕೆಗಳ ಮೇಲೆ ಯಾವುದೇ ಪರಿಣಾಮ ಬೀರುವುದಿಲ್ಲ ಎಂದು ಹೇಳಿದೆ. ಇನ್ಫೋಸಿಸ್ ಕೆನಡಾದಲ್ಲಿ ತನ್ನದೇ ಆದ ಅಸ್ತಿತ್ವವನ್ನು ಹೊಂದಿದೆ, ಆಲ್ಬರ್ಟಾ, ಒಂಟಾರಿಯೊದ ಮಿಸ್ಸಿಸೌಗಾ, ಬ್ರಿಟಿಷ್ ಕೊಲಂಬಿಯಾದ ಬರ್ನಾಬಿ ಮತ್ತು ಒಟ್ಟಾವಾ ಸೇರಿ ಹಲವೆಡೆ ಇನ್ಫೋಸಿಸ್ ಪ್ರಮುಖ ಕಚೇರಿಯನ್ನು ಹೊಂದಿದೆ ಎಂದು ಹೇಳಿಕೊಂಡಿದೆ.

‘ಉದ್ಯೋಗಿ ಆರೋಗ್ಯ ತೆರಿಗೆ’ (ಇಹೆಚ್‌ಟಿ) ಒಂಟಾರಿಯೊ ಮತ್ತು ಬ್ರಿಟಿಷ್ ಕೊಲಂಬಿಯಾದಂತಹ ಆಯ್ದ ಕೆನಡಾದ ಪ್ರಾಂತ್ಯಗಳಲ್ಲಿ ಉದ್ಯೋಗದಾತರ ಮೇಲೆ ವಿಧಿಸಲಾಗುವ ಕಡ್ಡಾಯ ವೇತನದಾರರ ತೆರಿಗೆಯಾಗಿದೆ. ವೇತನಗಳು, ಬೋನಸ್‌ಗಳು ಸೇರಿದಂತೆ ವಿವಿಧ ರೀತಿಯಲ್ಲಿ ತೆರಿಗೆಯನ್ನು ಲೆಕ್ಕಹಾಕಲಾಗುತ್ತದೆ. ಪ್ರಾಂತ್ಯದೊಳಗಿನ ಆರೋಗ್ಯ ಸೇವೆಗಳ ನಿಧಿಗೆ ಕೊಡುಗೆ ನೀಡುವುದು ಇದರ ಪ್ರಾಥಮಿಕ ಉದ್ದೇಶವಾಗಿದೆ.

# ಎಫ್‌ಸಿಐ ಗೋದಾಮಿನಲ್ಲಿ ಕೊಳೆಯುತ್ತಿರುವ 18 ಮಿಲಿಯನ್ ಟನ್ ಅಕ್ಕಿ: ಕೇಂದ್ರದ ವಿರುದ್ಧ ಕಾಂಗ್ರೆಸ್ ಕಿಡಿ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಭಾರತೀಯ ಆಹಾರ ನಿಗಮದ (ಎಫ್‌ಸಿಐ) ಗೋದಾಮುಗಳಲ್ಲಿ 18 ಮಿಲಿಯನ್ ಟನ್‌ಗಿಂತಲೂ ಹೆಚ್ಚು ಅಕ್ಕಿ ಕೊಳೆಯುತ್ತಿದ್ದು, ಅದನ್ನು ವಿಲೇವಾರಿ ಮಾಡಲು ಕೇಂದ್ರ ಸರ್ಕಾರ ಪರದಾಡುತ್ತಿದೆ ಎಂದು ವರದಿಗಳು ಹೇಳಿವೆ.



ಪ್ರಧಾನ ಮಂತ್ರಿ ಗರೀಬ್ ಕಲ್ಯಾಣ್ ಅನ್ನ ಯೋಜನೆ (ಪಿಎಂಜಿಕೆವೈ) ಅಡಿಯಲ್ಲಿ ಬಡವರಿಗೆ ಉಚಿತವಾಗಿ ವಿತರಿಸುವ ಅಕ್ಕಿಯ ವಿಶೇಷಣಗಳನ್ನು ಪರಿಷ್ಕರಿಸುವ ಪ್ರಸ್ತಾಪವನ್ನು ತಿರಸ್ಕರಿಸಿದ ನಂತರ, ಎಫ್‌ಸಿಐ ಗೋದಾಮುಗಳಲ್ಲಿನ ಅಕ್ಕಿಯ ವಿಲೇವಾರಿಗೆ ಸರ್ಕಾರ ಪರ್ಯಾಯ ಮಾರ್ಗಗಳನ್ನು ಹುಡುಕುತ್ತಿದೆ. ಸಿಫ್ಟರ್‌ಗಳು, ಗ್ರೇಡರ್‌ಗಳು ಮತ್ತು ಇತರ ಯಂತ್ರೋಪಕರಣಗಳ ಕೊರತೆಯಿಂದ ಗರೀಬ್ ಕಲ್ಯಾಣ್ ಯೋಜನೆಯ ಅಕ್ಕಿ ಪರಿಷ್ಕರಿಸುವ ಪ್ರಸ್ತಾವನೆಯು ತುಂಬಾ ದುಬಾರಿ ಮತ್ತು ಶ್ರಮದಾಯಕವೆಂದು ಕಂಡು ಬಂದಿದೆ ಎಂದು ಇಬ್ಬರು ಅಧಿಕಾರಿಗಳು ಉಲ್ಲೇಖಿಸಿ ಟುತಜ–ಟುಟಿಣ.ಛಿಂಟ ವರದಿ ಮಾಡಿದೆ.

ಪಿಎಂಜಿಕೆವೈ ಅಡಿಯಲ್ಲಿ ಅಕ್ಕಿ ಹಂಚಿಕೆಯನ್ನು ಹೆಚ್ಚಿಸುವುದು, ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ (ನರೇಗಾ) ನೌಕರರಿಗೆ ಉಚಿತ ಆಹಾರವನ್ನು ನೀಡುವುದು ಮತ್ತು ಮುಕ್ತ ಮಾರುಕಟ್ಟೆ ಮಾರಾಟ ಯೋಜನೆ (ಇಎಂಎಸ್‌ಎಸ್) ಅಡಿಯಲ್ಲಿ ಅಕ್ಕಿ ಬೆಲೆಯನ್ನು ಕಡಿಮೆ ಮಾಡುವುದು ಪ್ರಸ್ತುತ ಎಫ್‌ಸಿಐ ಮೇಜಿನ ಮೇಲೆ ಇರುವ ಪ್ರಸ್ತಾವಣೆಗಳಾಗಿವೆ. ಇವುಗಳನ್ನು ಕಾರ್ಯಗತಗೊಳಿಸುವುದು ಅಸಾಧ್ಯ ಎಂಬುವುದು ಸರ್ಕಾರಕ್ಕೆ ಮನದಟ್ಟಾಗಿದೆ.

ಎಫ್‌ಸಿಐ ಗೋದಾಮುಗಳಲ್ಲಿ 18 ಮಿಲಿಯನ್ ಟನ್‌ಗಿಂತಲೂ ಹೆಚ್ಚು ಅಕ್ಕಿ ಸುಮ್ಮನೆ ಕೊಳೆಯುತ್ತಿದೆ ಎಂಬ ವರದಿ ನೋಡಿದ ರಾಜ್ಯ ಕಾಂಗ್ರೆಸ್ ಕೇಂದ್ರ ಸರ್ಕಾರದ ವಿರುದ್ಧ ಕಿಡಿಕಾರಿದ್ದು, ಹಲವು ಪ್ರಶ್ನೆಗಳನ್ನು ಎತ್ತಿದೆ.

“ಬಡವರ ಹೊಟ್ಟೆಗೆ ವಂಚಿಸುವುದಕ್ಕಿಂತ ದೊಡ್ಡ ಕ್ರೌರ್ಯ ಇನ್ನೊಂದಿಲ್ಲ. 18 ಮಿಲಿಯನ್ ಟನ್ ಅಕ್ಕಿ ಹುಳು ಹಿಡಿದರೂ ಪರವಾಗಿಲ್ಲ, ಬಡವರ ಹೊಟ್ಟೆಗೆ ಅನ್ನವಾಗಬಾರದು ಎನ್ನುವ ಕೇಂದ್ರ ಸರ್ಕಾರದ ಧೂರ್ತತನಕ್ಕೆ ಜನತೆ ಪಾಠ ಕಲಿಸಲಿದ್ದಾರೆ. ಅನ್ನಭಾಗ್ಯ ಯೋಜನೆಗಾಗಿ ರಾಜ್ಯ ಸರ್ಕಾರ ಕೆಜಿಗೆ 34 ರೂಪಾಯಿಯಂತೆ ಖರೀದಿಗೆ ಕೇಳಿದರೂ ಕೊಡಲೊಪ್ಪದ ಕೇಂದ್ರ ಸರ್ಕಾರ, ಈಗ ಗೋದಾಮುಗಳಲ್ಲಿ ದಾಸ್ತಾನಿರುವ ಅಕ್ಕಿಯನ್ನು ಖಾಲಿ ಮಾಡಲು ಪರದಾಡುತ್ತಿದೆ” ಎಂದು ಕಾಂಗ್ರೆಸ್ ಎಕ್ಸ್ ಪೋಸ್ಟ್‌ನಲ್ಲಿ ಹೇಳಿದೆ.

### ಭಕ್ತ ಹಿತ ಚಿಂತನ ಸಮಾವೇಶದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಮನುಷ್ಯ ಮೂಲ ಸಂಸ್ಕೃತಿ ಮರೆಯಬಾರದು

■ ವಿಜಯಸಾಕ್ಷಿ ಸುದ್ದಿ, ಕಲಬುರ್ಗಿ

ಬೆಟ್ಟದಷ್ಟು ಕಷ್ಟಗಳು ಬಂದರೂ ಅಚಲವಾದ ಗಟ್ಟಿತನ ನಮ್ಮದಾಗಬೇಕು. ಸತ್ಯ ಧರ್ಮ ಪರಿಪಾಲನೆಯಿಂದ ಮನಸ್ಸು ಪರಿಶುದ್ಧಗೊಳ್ಳುತ್ತದೆ. ಮನುಷ್ಯ ಎಷ್ಟೇ ಎತ್ತರಕ್ಕೆ ಬೆಳೆದರೂ ಮೂಲ ಸಂಸ್ಕೃತಿ ಮರೆಯಬಾರದೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಬುಧವಾರ ತಾಲೂಕಿನ ಶ್ರೀನಿವಾಸ ಸರಡಗಿ ಚಿನ್ನದಕಂತಿ ಚಿಕ್ಕವೀರೇಶ್ವರ ಸಂಸ್ಥಾನ ಹಿರೇಮಠದ ಡಾ. ರೇವಣಸಿದ್ಧ ಶಿವಾಚಾರ್ಯರ ಷಷ್ಠಿಪೂರ್ತಿ ಸಮಾರಂಭ ಅಂಗವಾಗಿ ಮಂಗಲ ಸ್ನಾನ ಹಾಗೂ ನೂತನ ಉತ್ತರಾಧಿಕಾರಿ ನಿಯುಕ್ತಿ ಅಂಗವಾಗಿ ಜರುಗಿದ ಭಕ್ತ ಹಿತ ಚಿಂತನ ಸಮಾವೇಶದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಆಧುನಿಕ ವಿಜ್ಞಾನ ಎಲ್ಲಿ ನಿರುತ್ತರವಾಗುವುದೋ ಅಲ್ಲಿಂದ ಭಾರತೀಯ ಆಧ್ಯಾತ್ಮ ಚಿಂತನೆ ಪ್ರಾರಂಭಗೊಳ್ಳುತ್ತದೆ ಎಂಬ ದಿವಂಗತ ರಾಷ್ಟ್ರಪತಿ ಡಾ. ಎಸ್.ರಾಧಾಕೃಷ್ಣನ್ ಅವರ ಮಾತಿನಂತೆ ಧರ್ಮ ಮತ್ತು ಸಂಸ್ಕೃತಿಗೆ ಅತ್ಯಂತ ಮಹತ್ವವಿದೆ. ಬದುಕಿನ ಯಶಸ್ಸಿಗಾಗಿ ಲೌಕಿಕ ಜ್ಞಾನ ಹೇಗೆ ಅವಶ್ಯಕವೋ ಹಾಗೆ ನೊಂದ-ಬೆಂದ ಮನಕ್ಕೆ ಆಧ್ಯಾತ್ಮ ಜ್ಞಾನದ ಅವಶ್ಯಕತೆಯಿದೆ. ಗುರಿಯಿಲ್ಲದ ಮತ್ತು ಗುರಿ ಸಾಧಿಸದ ವ್ಯಕ್ತಿಯ ಜೀವನ ನಿರರ್ಥಕವಾಗುತ್ತದೆ ಎಂಬ ಶ್ರೀ ಜಗದ್ಗುರು ರೇಣುಕಾಚಾರ್ಯರ ಸಂದೇಶದಂತೆ ಮನುಷ್ಯ ಜಾಗೃತನಾಗಿ ಧರ್ಮ ಪಾಲನೆ ಮಾಡಿಕೊಂಡು ಮುನ್ನಡೆಯಬೇಕಾಗಿದೆ.



ಹುಟ್ಟು ಎಷ್ಟು ಸಹಜವೋ, ಸಾವು ಅಷ್ಟೇ ನಿಶ್ಚಿತ. ಇವೆರಡರ ಮಧ್ಯದ ಬದುಕು ಸಮೃದ್ಧಗೊಳಿಸಲು ಮಹಾತ್ಮರು ತೋರಿದ ದಾರಿ ಸದಾ ಆಶಾಕಿರಣವಾಗಿದೆ. ಶ್ರೀ ರೇವಣಸಿದ್ಧ ಶಿವಾಚಾರ್ಯರು ತಮ್ಮ ನಿರಂತರ ಪ್ರಯತ್ನ ಮತ್ತು ಸಾಧನೆಯಿಂದ ಶ್ರೀ ಮಠದ ಗೌರವ ಘನತೆಯನ್ನು ಹೆಚ್ಚಿಸಿದ್ದಾರೆ. ಶ್ರೀಗಳವರ ಕ್ರಿಯಾಶೀಲ ಬದುಕು ಅವರ ಜೀವನದ ಶ್ರೇಯಸ್ಸಿಗೆ ಸಾಕ್ಷಿಯಾಗಿದೆ. ಶ್ರೀಗಳವರು ಸಶಕ್ತವಾಗಿರುವಾಗಲೇ ಪುತ್ರವರ್ಗ ಪರಂಪರೆಯಂತೆ ಅದ್ವಿಕ್ ಎಂಬ ವಟುವನ್ನು ಸ್ವೀಕರಿಸಿ ತಮ್ಮ ಉತ್ತರಾಧಿಕಾರಿಗಳೆಂದು ಘೋಷಿಸಿರುವುದು ಅವರ ತ್ಯಾಗ, ಔದಾರ್ಯಕ್ಕೆ ಈ ಸಮಾರಂಭ ಸಾಕ್ಷಿಯಾಗಿದೆ ಎಂದರು.


ಈ ಪವಿತ್ರ ಸಮಾರಂಭದಲ್ಲಿ ಸ್ಟೇಷನ್ ಬಬಲಾದ ಶಿವಮೂರ್ತಿ ಶಿವಾಚಾರ್ಯರು, ಕಲಬುರ್ಗಿ ಡಾ.ರಾಜಶೇಖರ ಶಿವಾಚಾರ್ಯರು, ತೊನಸನಹಳ್ಳಿ ರೇವಣಸಿದ್ಧ ಚರಂತೇಶ್ವರ ಶಿವಾಚಾರ್ಯರು, ಆಲಮೇಲ ಚಂದ್ರಶೇಖರ ಶಿವಾಚಾರ್ಯರು, ಕಲಕರ್ಟಿ ರಾಜಶೇಖರ ಶಿವಾಚಾರ್ಯರು, ಆಳಂದ ಸಿದ್ಧಲಿಂಗ ಶಿವಾಚಾರ್ಯರು ಪಾಲ್ಗೊಂಡು ನುಡಿ ನಮನ ಸಲ್ಲಿಸಿದರು.

ಕಲಬುರ್ಗಿಯ ಬಸವರಾಜ ಭೀಮಳ್ಳಿ, ಅಣ್ಣಾರಾವ್ ಬಿರಾದಾರ, ಅಮೃತಪ್ಪ ಗೌಡ, ಬೆಂಗಳೂರಿನ ಬೀರೂರು ಶಿವಸ್ವಾಮಿ, ಆರ್.ಆರ್. ಹಿರೇಮಠ, ಜೇರಟಗಿ ಮಡಿವಾಳ ಶಾಸ್ತ್ರಿಗಳು, ಬ್ಯಾಹಟ್ಟಿ ಸತೀಶ ಹಿರೇಮಠ ಸೇರಿದಂತೆ ಹಲವಾರು ಗಣ್ಯರಿಗೆ ಮತ್ತು ದಾನಿಗಳಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆಯಿತ್ತು ಶುಭ ಹಾರೈಸಿದರು. ನಾಗಲಿಂಗಯ್ಯ ಹಿರೇಮಠ ಮತ್ತು ಹಣಮಂತ್ರಾಯ ಅಟ್ಟೂರು ನಿರೂಪಣೆ ಮಾಡಿದರು.

ಸಮಾರಂಭದ ನೇತೃತ್ವ ವಹಿಸಿದ ಡಾ. ಶ್ರೀ ರೇವಣಸಿದ್ಧ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ನೀರಿನಲ್ಲಿ ಸ್ನಾನ ಮಾಡಿದರೆ ಬಟ್ಟೆ ಬದಲಿಸಬಹುದು. ಬೆವರಿನಲ್ಲಿ ಸ್ನಾನ ಮಾಡಿದರೆ ಇತಿಹಾಸವನ್ನು ನಿರ್ಮಿಸಲು ಸಾಧ್ಯ. ಸುಣ್ಣದ ನೀರು ಹಾಲಿನಂತೆ ಬೆಳ್ಳಗೆ ಕಾಣುತ್ತದೆ. ಆದರೆ ಗುಣ ಮತ್ತು ರುಚಿ ಮಾತ್ರ ಬೇರೆಯಾಗಿರುತ್ತದೆ. ಅದೇ ರೀತಿ ಕೆಲವರು ನಮ್ಮವರಂತೆ ಕಂಡರೂ ಅವರ ಒಳಗಿನ ರೂಪ ಭಾವನೆ ಬೇರೆಯೇ ಇರುತ್ತದೆ ಎಂಬುದನ್ನು ಮರೆಯಬಾರದು. ವೀರಶೈವ ಧರ್ಮ ಸಂಸ್ಕೃತಿ ಮತ್ತು ಸಂಸ್ಕಾರ ಕಲಿಸಿಕೊಟ್ಟಿದ್ದನ್ನು ಅನುಸರಿಸಿ ಬಾಳಬೇಕೆಂದರು.

## 'ಹಳ್ಳಿಗಳನ್ನು ಕಟ್ಟುವ ಕಷ್ಟಸುಖ' ಬಿಡುಗಡೆ ಮೇ.19ಕ್ಕೆ

■ ವಿಜಯಸಾಕ್ಷಿ ಸುದ್ದಿ, ಧಾರವಾಡ



ಖ್ಯಾತ ಸಮಾಜ ವಿಜ್ಞಾನಿ ಡಾ. ಪ್ರಕಾಶ ಭಟ್ ಅವರ ಮಹತ್ವದ ಕೃತಿ, 'ಬಹುರೂಪಿ'ಯ ಪ್ರಕಟಣೆ 'ಹಳ್ಳಿಗಳನ್ನು ಕಟ್ಟುವ ಕಷ್ಟಸುಖ' ಬಿಡುಗಡೆಯನ್ನು ಮೇ 19ರಂದು ಧಾರವಾಡದ ಕರ್ನಾಟಕ ಕುಲಪುರೋಹಿತ ಆಲೂರ ವೆಂಕಟರಾವ್ ಸಾಂಸ್ಕೃತಿಕ ಸಭಾಂಗಣದಲ್ಲಿ ಬೆಳಗ್ಗೆ 10.30ಕ್ಕ ಹಮ್ಮಿಕೊಳ್ಳಲಾಗಿದೆ.

ಬೆಂಗಳೂರಿನ 'ಬಹುರೂಪಿ' ಹಾಗೂ ಸೂರಶೆಟ್ಟಿಕೊಪ್ಪದ 'ಸರ್ವೋದಯ ಮಹಾಸಂಘ' ಜಂಟಿಯಾಗಿ ಈ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ. ಹಳ್ಳಿಗಳನ್ನು ಅಭಿವೃದ್ಧಿಗೊಳಿಸುವ ನಿಟ್ಟಿನಲಿ ಹೊಸ ಕಾಣ್ಕೆಯನ್ನು ನೀಡುವ ಕೃತಿ ಇದು. ಕಲಘಟಗಿ ತಾಲೂಕಿನ ಸೂರಶೆಟ್ಟಿಕೊಪ್ಪ ಹಾಗೂ ಶಿರಸಿ ತಾಲೂಕಿನ ದಾಸನಕೊಪ್ಪದ 50 ಹಳ್ಳಿಗಳು ಹೊಸ ಬೆಳಕಿನತ್ತ ಹೆಜ್ಜೆ ಹಾಕಿದ ಕಥನ ಇದು. ಈ ಕೃತಿಯನ್ನು ಈ ಹಳ್ಳಿಗಳವರೇ ಬಿಡುಗಡೆಗೊಳಿಸುತ್ತಿದ್ದಾರೆ ಎನ್ನುವುದು ವಿಶೇಷ ಎಂದು ಬಹುರೂಪಿಯ ಸ್ಥಾಪಕರಾದ ಶ್ರೀಜಾ ವಿ.ಎನ್. ಹಾಗೂ ಸರ್ವೋದಯ ಮಹಾಸಂಘದ ರೇಣಪ್ಪಗೌಡ ಭಾವಿಕಟ್ಟಿ ತಿಳಿಸಿದ್ದಾರೆ.

ಖ್ಯಾತ ವಿಜ್ಞಾನ ಅಂಕಣಕಾರ, ಸಾಹಿತಿ ಹಾಗೂ ಹಳ್ಳಿಗಳ ಈ ಮಾರ್ಪಾಟನ್ನು ಸ್ವತಃ ಕಂಡ ನಾಗೇಶ ಹೆಗಡೆ ಅವರು ಈ ಕೃತಿಯ ವಿಶೇಷತೆಯ ಬಗ್ಗೆ ಮಾತನಾಡಲಿದ್ದಾರೆ. ನಂತರ, ಡಾ. ಪ್ರಕಾಶ ಭಟ್ ಅವರೊಂದಿಗೆ ಸಂವಾದ ಜರುಗಲಿದೆ. ಹಿರಿಯ ಪತ್ರಕರ್ತ ಜಿ.ಎನ್. ಮೋಹನ್, ಆಂಧ್ರ ಪ್ರದೇಶದ ಬುಡಕಟ್ಟು ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ. ತೇಜಸ್ವಿ ಕಟ್ಟಿಮನಿ, ಹಿರಿಯ ಸಾಹಿತಿ, ಶಿಕ್ಷಣ ತಜ್ಞ ಡಾ. ಬಿಳಿಗೆರೆ ಕೃಷ್ಣಮೂರ್ತಿ ಅವರು ಸಂವಾದದಲ್ಲಿ ಭಾಗವಹಿಸುತ್ತಾರೆ. ಸುನಂದಾ ಪ್ರಕಾಶ್ ಅವರು ಈ ಇಡೀ ಹಳ್ಳಿ ಕಟ್ಟುವ ಪ್ರಕ್ರಿಯೆಗೆ ಪ್ರತಿಕ್ರಿಯಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ಸೂರಶೆಟ್ಟಿಕೊಪ್ಪ ಹಾಗೂ ದಾಸನಪುರದ ಹಲವಾರು ಗ್ರಾಮಸ್ಥರು ಭಾಗವಹಿಸಿ ತಮ್ಮ ಅನುಭವಗಳನ್ನು ಹಂಚಿಕೊಳ್ಳಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

## ಎಸ್ಎಸ್ಎಲ್‌ಸಿಯಲ್ಲಿ ಶೇ 100ರಷ್ಟು ಸಾಧನೆ



■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಹುಲಕೋಟಿಯ ಕೆ.ಎಚ್. ಪಾಟೀಲ ಬಾಲಕಿಯರ ಸರಕಾರಿ ಪ್ರೌಢಶಾಲೆಯ ವಿದ್ಯಾರ್ಥಿಗಳು ಈ ಬಾರಿಯ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶ ದಾಖಲಿಸಿದ್ದಾರೆ.

ಆಸ್ಮಾ ಹರ್ಲಾಪೂರ ಶೇ. 96 ಅಂಕಗಳೊಂದಿಗೆ ಶಾಲೆಗೆ ಪ್ರಥಮ, ಸ್ನೇಹಾ ಮಾಲಿಪಾಟೀಲ ಶೇ. 93.92 ಅಂಕಗಳೊಂದಿಗೆ ದ್ವಿತೀಯ ಸ್ಥಾನ, ಸಾವಿತ್ರಿ ಹೊಸಮನಿ ಶೇ. 91.84 ಅಂಕಗಳೊಂದಿಗೆ ಶಾಲೆಗೆ ತೃತೀಯ ಸ್ಥಾನ ಪಡೆದುಕೊಂಡಿದ್ದಾರೆ.

ಶೃತಿ ತೋರಗಲ್, ಭುವನೇಶ್ವರಿ ಹೊಂಬಳ, ವಿದ್ಯಾಶ್ರೀ ಲಕ್ಕನವರ, ಕವಿತಾ ಹಿತ್ತಬುಟ್ಟಿ, ಪೂಜಾ ಈರಗಾರ, ಮಧುಮತಿ ಬಿಸೇಬುದಿ, ಚನ್ನಮ್ಮ ಕೋಟಿ, ವೀಣಾ ಬಡಿಗೇರ, ಸೃಷ್ಟಿ ಕುಸಗಲ್, ಅಂಕಿತಾ ಜಾಧವ, ಭಾಗ್ಯಶ್ರೀ ಕರಿಗಾರ ಇವರೆಲ್ಲರೂ ಶೇ. 80ಕ್ಕಿಂತ ಹೆಚ್ಚು ಅಂಕ ಗಳಿಸಿದ್ದಾರೆ. ಕೆ.ಎಚ್. ಪಾಟೀಲ ಹಿತಾಭಿವೃದ್ಧಿ ಸಂಘದ ಅಧ್ಯಕ್ಷ ಪಿ.ಕೆ. ಪಾಟೀಲ ಹಾಗೂ ಗ್ರಾಮಸ್ಥರು, ಎಸ್.ಡಿ.ಎಂ.ಸಿ ಅಧ್ಯಕ್ಷರಾದ ಸುಧಾ ಹಿರೇಮಠ, ಸದಸ್ಯರು, ಮುಖ್ಯೋಪಾಧ್ಯಾಯರಾದ ಎಫ್.ಎ. ಖಾನ್, ಎಲ್ಲಾ ಸಹ ಶಿಕ್ಷಕರು ಮತ್ತು ಸಿಬ್ಬಂದಿಯವರು ಸಾಧಕ ವಿದ್ಯಾರ್ಥಿಗಳನ್ನು ಅಭಿನಂದಿಸಿದ್ದಾರೆ.

### ರಾಷ್ಟ್ರೀಯ ಭಾವೈಕ್ಯತಾ ಶಿಬಿರದ ಸಮಾರೋಪ ಸಮಾರಂಭದಲ್ಲಿ ಕುಲಪತಿ ಡಾ.ಸಿ. ಬಸವರಾಜು

## ಎನ್‌ಎಸ್‌ಎಸ್‌ನಿಂದ ಸೇವಾ ಮನೋಭಾವ ವೃದ್ಧಿ

■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ರಾಷ್ಟ್ರೀಯ ಸೇವಾ ಯೋಜನೆ (ಎನ್‌ಎಸ್‌ಎಸ್) ಯುವಕರಿಗೆ ಸಮಾಜ ಸೇವೆ ಮಾಡಲು ಮತ್ತು ರಾಷ್ಟ್ರೀಯತೆಯ ಮನೋಭಾವವನ್ನು ಬೆಳೆಸಿಕೊಳ್ಳಲು ಅವಕಾಶ ಕಲ್ಪಿಸುತ್ತದೆ ಎಂದು ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ಕುಲಪತಿ ಡಾ. ಸಿ.ಬಸವರಾಜು ಹೇಳಿದರು.




ಬುಧವಾರ ನವನಗರದ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ರಾಜ್ಯ ಎನ್‌ಎಸ್‌ಎಸ್ ಘಟಕ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಎನ್‌ಎಸ್‌ಎಸ್‌ನ ಪ್ರಾದೇಶಿಕ ನಿರ್ದೇಶನಾಲಯ ಹಾಗೂ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ರಾಷ್ಟ್ರೀಯ ಸೇವಾ ಯೋಜನೆ ಸಹಯೋಗದಲ್ಲಿ ಆಯೋಜಿಸಿದ್ದ ರಾಷ್ಟ್ರೀಯ ಭಾವೈಕ್ಯತಾ ಶಿಬಿರದ ಸಮಾರೋಪ ಸಮಾರಂಭದಲ್ಲಿ ಅವರು ಮಾತನಾಡಿದರು.

ಎನ್‌ಎಸ್‌ಎಸ್ ಆಯೋಜಿಸುವ ಚಟುವಟಿಕೆಗಳಲ್ಲಿ ಭಾಗವಹಿಸುವುದರಿಂದ ಯುವಕರಲ್ಲಿ ಏಕತೆ ಮತ್ತು ಸಮಗ್ರತೆಯ ಭಾವನೆ ಮೂಡುತ್ತದೆ. ಹಾಗಾಗಿ ಇಂತಹ ಚಟುವಟಿಕೆಗಳಿಗೆ ಪ್ರೋತ್ಸಾಹ ನೀಡಬೇಕು. ಭಾಷೆ ಬೇರೆಯಾದರೂ ಏಕತೆಯ ಸಂಸ್ಕೃತಿಯನ್ನು ಭಾರತೀಯ ಭಾವೈಕ್ಯತೆಯಲ್ಲಿ ಕಾಣಬಹುದು ಎಂದರು.

ಬೆಂಗಳೂರು ಗಾಂಧಿ ಭವನದ ನಿರ್ದೇಶಕ ಜಿ.ಬಿ. ಶಿವರಾಜು ಮಾತನಾಡಿ, ವಿದ್ಯಾರ್ಥಿಗಳು ಸಾಮಾಜಿಕ ಜವಾಬ್ದಾರಿಯುತ ನಾಗರಿಕರಾಗಿ ದೇಶದ ಸರ್ವಾಂಗೀಣ ಅಭಿವೃದ್ಧಿಗೆ ಶ್ರಮಿಸಬೇಕು. ಸಮಾಜದ ಬಗ್ಗೆ ಜವಾಬ್ದಾರಿಯನ್ನು ತೆಗೆದು-ಕೊಂಡಾಗ ಮಾತ್ರ ಸಮಾಜ ಸುಧಾರಣೆಯಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ರಿಜಿಸ್ಟ್ರಾರ್ ಅನುರಾಧಾ ವಸ್ತ್ರದ, ವಿಶ್ವವಿದ್ಯಾಲಯದ ಡೀನ್ ಮತ್ತು ಹಣಕಾಸು ಅಧಿಕಾರಿ ಡಾ. ಜಿ.ಬಿ. ಪಾಟೀಲ, ಮೌಲ್ಯಮಾಪನ ರಿಜಿಸ್ಟ್ರಾರ್ ಡಾ. ರತ್ನಾ ಆರ್.ಭರಮಗೌಡ್ರ, ವಿವಿಯ ಎನ್‌ಎಸ್‌ಎಸ್ ಸಂಯೋಜಕರಾದ ಐ.ಬಿ. ಬಿರಾದಾರ, ಸಿಂಡಿಕೇಟ್ ಸದಸ್ಯರಾದ ಹೆಚ್.ವಿ. ಬೆಳಗಲಿ, ವಸಂತ ಲದವಾ, ಕಾನೂನು ವಿಶ್ವವಿದ್ಯಾಲಯದ ಪ್ರಾಧ್ಯಾಪಕರು ಹಾಗೂ ವಿವಿಧ ವಿಶ್ವವಿದ್ಯಾಲಯದ ಎನ್‌ಎಸ್‌ಎಸ್ ಸಂಯೋಜಕರು ಮತ್ತು ಶಿಬಿರಾರ್ಥಿಗಳು ಉಪಸ್ಥಿತರಿದ್ದರು.

ಬೆಂಗಳೂರು ಎನ್‌ಎಸ್‌ಎಸ್ ಪ್ರಾದೇಶಿಕ ನಿರ್ದೇಶಕ ಡಿ. ಕಾರ್ತಿಗೇಯನ್ ಮಾತನಾಡಿ, ರಾಷ್ಟ್ರೀಯ ಭಾವೈಕ್ಯತಾ ಶಿಬಿರವು ಯುವಕರಿಗೆ ಮಾತನಾಡುವ ಶೈಲಿ, ಹಿರಿಯರಿಗೆ ಗೌರವ ನೀಡುವುದರ ಬಗ್ಗೆ ತಿಳಿಸಿಕೊಡಲಿದೆ. ಸಂಸ್ಕೃತಿ, ಭಾಷೆ, ಸಹೋದರ ಮನೋಭಾವವನ್ನು ಬೆಳೆಸಿಕೊಳ್ಳಲು ಸಹಾಯಕವಾಗಿದೆ. ಈ ಅಂಶಗಳು ವಿದ್ಯಾರ್ಥಿಗಳ ಮುಂದಿನ ಜೀವನಕ್ಕೆ ಉಪಯೋಗಕಾರಿಯಾಗಲಿವೆ ಎಂದು ತಿಳಿಸಿದರು.

## ರಾಜಕೀಯ ಚರ್ಚೆ ನಿಲ್ಲಿಸಿ, ಆರೋಪಿಯನ್ನು ಬಂಧಿಸಿ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು



ಪ್ರಜ್ವಲ್ ರೇವಣ್ಣ ಪೆನ್‌ಡ್ರೈವ್ ಹಗರಣದಿಂದ ನಾಡಿನ ಜನತೆ ತಲೆ ಎತ್ತಿ ನಡೆಯದಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಈ ಅನೈತಿಕ ವ್ಯವಹಾರವನ್ನು ಹಿಡಿದು ಎರಡು ಪಕ್ಷಗಳು ಆರೋಪ ಪ್ರತ್ಯಾರೋಪ ಮಾಡಿ ಮಾತಿನ ಸಮರ ನಡೆಸುತ್ತಿರುವುದು ನಾಚಿಕೆಗೇಡಿನ ವಿಷಯ ಎಂದು ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾದ ರಾಜ್ಯಾಧ್ಯಕ್ಷ ತಾಹೇರ್ ಹುಸೇನ್ ಅಭಿಪ್ರಾಯಪಟ್ಟಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಹಣ, ಅಧಿಕಾರ ಬಳಸಿ ಅನೈತಿಕ ಸಂಬಂಧ ಬೆಳೆಸಿದ ಪ್ರಜ್ವಲ್ ಪ್ರಕರಣದಿಂದ ರಾಜ್ಯದ ಮಾನ ಹರಾಜಾಗಿದೆ. ದೇಶಾದ್ಯಂತ ಈ ಪ್ರಕರಣ ಸುದ್ದಿಯಾಗುತ್ತಿದೆ. ಅತ್ಯಾಚಾರ ಆರೋಪಿ ಪ್ರಜ್ವಲ್‌ನನ್ನು ಬಂಧಿಸಿ ರಾಜ್ಯದ ಗೌರವ ಕಾಪಾಡುವ ಬದಲು ಪೆನ್‌ಡ್ರೈವ್ ಬಹಿರಂಗಪಡಿಸಿದವರು ಯಾರು ಎಂಬ ಚರ್ಚೆಯಾಗುತ್ತಿರುವುದು ಹಾಸ್ಯಾಸ್ಪದ. ರಾಜಕೀಯ ಪ್ರಭಾವ ಬಳಸಿ ದೇಶದಿಂದ ಆರೋಪಿಗಳು ಪರಾರಿಯಾಗುವುದು ಇಲ್ಲಿ ಸಾಮಾನ್ಯವಾಗಿದೆ. ಇಂತಹ ಬೆಳವಣಿಗೆಗಳಿಗೆ ಅಂತ್ಯ ಹಾಡಬೇಕು.

ಎಷ್ಟೇ ಪ್ರತಿಷ್ಠಿತ ಕುಟುಂಬವಾದರೂ ಸರಿ, ಇಂತಹ ಅನಾಗರಿಕ ಹಗರಣದ ಆರೋಪಿಗಳನ್ನು ಯಾರೂ ಬೆಂಬಲಿಸಬಾರದು. ಕನ್ನಡ ನಾಡಿನ ಮಾನಕ್ಕೆ ಧಕ್ಕೆ ತಂದಿರುವ ಪ್ರಕರಣದಲ್ಲಿ ರಾಜಕೀಯವನ್ನು ಬದಿಗಿಟ್ಟು ಪ್ರಾಮಾಣಿಕವಾಗಿ ವರ್ತಿಸಿ, ಆರೋಪಿಗಳು ಕಾನೂನಿನ ಕುಣಿಕೆಯಿಂದ ತಪ್ಪಿಸಿಕೊಳ್ಳದಂತೆ ಕ್ರಮ ಕೈಗೊಂಡು. ಸಂತ್ರಸ್ತರಿಗೆ ನ್ಯಾಯ ಒದಗಿಸಿ ಎಂದು ಅವರು ಹೇಳಿದ್ದಾರೆ.

## ಎಕ್ಸೆಲ್ ಅಕಾಡೆಮಿಕ್ಸ್‌ನಿಂದ ಉಚಿತ ಕಾರ್ಯಾಗಾರ

■ ವಿಜಯಸಾಕ್ಷಿ ಸುದ್ದಿ, ಗದಗ

ಬೆಂಗಳೂರಿನ ಎಕ್ಸೆಲ್ ಅಕಾಡೆಮಿಕ್ಸ್ ಸಂಸ್ಥೆಯ ವತಿಯಿಂದ ವಿಜ್ಞಾನ ವಿಭಾಗದ ದ್ವಿತೀಯ ಪಿಯುಸಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ CET, NEET, JEE ಬಗ್ಗೆ Free Counselling ಸಭೆಯನ್ನು ಮೇ. 18ರಂದು ಗದಗ ನಗರದ ಕೃಷ್ಣಾ ಟಾಕೀಸ್ ಹತ್ತಿರವಿರುವ ಶ್ರೀ ತೋಂಟದ ಸಿದ್ದಲಿಂಗೇಶ್ವರ ಕಲ್ಯಾಣ ಮಂಟಪದಲ್ಲಿ ಬೆಳಿಗ್ಗೆ 9.45ರಿಂದ ಮಧ್ಯಾಹ್ನ 1.45ವರೆಗೆ ಏರ್ಪಡಿಸಲಾಗಿದೆ.

ಈ ಕಾರ್ಯಾಗಾರದಲ್ಲಿ ಸಂಪನ್ಮೂಲ ವ್ಯಕ್ತಿಗಳು NEET, K-CETಗೆ ಅರ್ಹತೆ ಕಟಾಯಿಸಿದ ಅಂಕಗಳು, ರಾಜ್ಯ ಹಾಗೂ ರಾಷ್ಟ್ರಮಟ್ಟದ ಮೀಸಲಾತಿ ಪ್ರಮಾಣಗಳು, ವಿವಿಧ ಕೋರ್ಸ್‌ಗಳ ಆಯ್ಕೆ, ಉತ್ತಮ ಕಾಲೇಜುಗಳ ಆಯ್ಕೆ, ಆನ್‌ಲೈನ್ ಮೂಲಕ ದಾಖಲಾತಿ, ಪ್ರವೇಶ ಪ್ರಕ್ರಿಯೆಗಳ ಬಗ್ಗೆ ಮಾಹಿತಿಯನ್ನು ನೀಡುತ್ತಾರೆ. ಅರ್ಹ ವಿದ್ಯಾರ್ಥಿಗಳು ಪೋಷಕರೊಂದಿಗೆ ಆಗಮಿಸಿ ಇದರ ಸದುಪಯೋಗವನ್ನು ಪಡೆಯಬೇಕೆಂದು ಪತ್ರಿಕಾ ಪ್ರಕಟಣೆಯ ಮೂಲಕ ಕೋರಲಾಗಿದೆ.

## ಸಾಧಕರಿಗೆ ಸನ್ಮಾನ



■ ವಿಜಯಸಾಕ್ಷಿ ಸುದ್ದಿ, ಗದಗ

ತಮಿಳುನಾಡಿನ ಏಶಿಯಾ ಇಂಟರನ್ಯಾಶನಲ್ ಕಲ್ಚರ್ ಅಕಾಡೆಮಿ ಇತ್ತೀಚೆಗೆ ನವ ಕರ್ನಾಟಕ ಜನಪರ ಅಭಿವೃದ್ಧಿ ವೇದಿಕೆ ಕಾರ್ಮಿಕ ಘಟಕದ ರಾಜ್ಯಾಧ್ಯಕ್ಷ ಡಾ.ಶಿವಾನಂದ ಹಿರೇಮಠ, ಜಿಲ್ಲಾಧ್ಯಕ್ಷ ಡಾ. ಶಿವಕುಮಾರ ರಾಮನಕೊಪ್ಪ ಹಾಗೂ ಸಾಮಾಜಿಕ ಕಾರ್ಯಕರ್ತ ಡಾ. ಎಸ್.ಎಸ್. ರಡ್ಡೇರ ಅವರಿಗೆ ಗೌರವ ಡಾಕ್ಟರೇಟ್ ಪ್ರಶಸ್ತಿ ನೀಡಿ ಗೌರವಿಸಿರುವ ಹಿನ್ನೆಲೆಯಲ್ಲಿ ನವ ಕರ್ನಾಟಕ ಜನಪರ ಅಭಿವೃದ್ಧಿ ವೇದಿಕೆಯ ವತಿಯಿಂದ ಸನ್ಮಾನಿಸಿ, ಶುಭ ಹಾರೈಸಲಾಯಿತು.

ಈ ಸಂದರ್ಭದಲ್ಲಿ ವೇದಿಕೆಯ ರಾಜ್ಯ ಪದಾಧಿಕಾರಿಗಳಾದ ಶಿವಾನಂದ ಪಲ್ಲೇದ, ಎಮ್.ಎಸ್. ಪರ್ವತಗೌಡರ, ಪ್ರಭಾಕರ ಹೆಬಸೂರ, ಯು.ಆರ್. ಬೂಸನೂರಮಠ, ಸೋಳಂಕಿ, ಮಹಾಂತೇಶ ರಡ್ಡೇರ ಸೇರಿದಂತೆ ಹಲವರಿದ್ದರು.

## ಐದು ವರ್ಷ ಹಳೆಯ ಯುಎಪಿಎ ಪ್ರಕರಣದಲ್ಲಿ ಕಾಶ್ಮೀರಿ ಪತ್ರಕರ್ತ ಆಸಿಫ್ ಸುಲ್ತಾನ್‌ಗೆ ಜಾಮೀನು

■ ವಿಜಯಸಾಕ್ಷಿ ಸುದ್ದಿ, ಶ್ರೀನಗರ




ಐದು ವರ್ಷಗಳ ಹಿಂದಿನ ಕಾನೂನುಬಾಹಿರ ಚಟುವಟಿಕೆಗಳ ತಡೆ ಕಾಯ್ದೆ(ಯುಎಪಿಎ)ಯಡಿ ದಾಖಲಾದ ಪ್ರಕರಣಕ್ಕೆ ಸಂಬಂಧಿಸಿದಂತೆ ಕಾಶ್ಮೀರಿ ಪತ್ರಕರ್ತ ಆಸಿಫ್ ಸುಲ್ತಾನ್‌ಗೆ ಶ್ರೀನಗರದ ವಿಶೇಷ ನ್ಯಾಯಾಲಯ ಜಾಮೀನು ನೀಡಿದೆ.

ಈ ಪ್ರಕರಣವು 2019ರಲ್ಲಿ ಶ್ರೀನಗರದ ಸೆಂಟ್ರಲ್ ಜೈಲಿನಲ್ಲಿ ನಡೆದ ಗಲಭೆ ಘಟನೆಗೆ ಸಂಬಂಧಿಸಿದೆ. ಕೈದಿಗಳ ಗುಂಪು ಕೆಲ ಬ್ಯಾರಕ್‌ಗಳಿಗೆ ಬೆಂಕಿ ಹಚ್ಚಿ ಜೈಲು ಸಿಬ್ಬಂದಿಯ ಮೇಲೆ ಕಲ್ಲು ಎಸೆದಿತ್ತು ಎಂದು ಆರೋಪಿಸಲಾಗಿತ್ತು.

ಸಾರ್ವಜನಿಕ ಸುರಕ್ಷತಾ ಕಾಯ್ದೆಯಡಿ ಬಂಧನದಿಂದ ಬಿಡುಗಡೆ-ಯಾದ ಎರಡು ದಿನಗಳ ನಂತರ ಫೆಬ್ರವರಿ 29 ರಂದು ಸುಲ್ತಾನ್ ಅವರನ್ನು ಈ ಪ್ರಕರಣದಲ್ಲಿ ಬಂಧಿಸಲಾಗಿತ್ತು.

ಸಾರ್ವಜನಿಕ ಸುರಕ್ಷತಾ ಕಾಯಿದೆಯು ಅಧಿಕಾರಿಗಳು ರಾಷ್ಟ್ರೀಯ ಭದ್ರತೆಯ ಆಧಾರದ ಮೇಲೆ ಎರಡು ವರ್ಷಗಳವರೆಗೆ ಮತ್ತು ಸಾರ್ವಜನಿಕ ಸುವ್ಯವಸ್ಥೆಯನ್ನು ಕಾಪಾಡಿಕೊಳ್ಳಲು ಒಂದು ವರ್ಷದವರೆಗೆ ವಿಚಾರಣೆಯಿಲ್ಲದೆ ವ್ಯಕ್ತಿಗಳನ್ನು ಬಂಧನದಲ್ಲಿಡಲು ಅನುಮತಿಸುತ್ತದೆ.

## ಶರಣರ ಸಂಗವು ಆತ್ಮಕಲ್ಯಾಣಕ್ಕೆ ದಾರಿ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಗ್ರಾಮೀಣ ಭಾಗದಲ್ಲಿ ಆಗಾಗ ಧಾರ್ಮಿಕ ಕಾರ್ಯಕ್ರಮ ಆಯೋಜಿಸುವುದರಿಂದಲೇ ನೆಮ್ಮದಿಯ ಜೀವನ ಸಾಗಿಸಲು ಸಾಧ್ಯವಾಗುತ್ತಿದೆ ಎಂದು ಸಿದ್ಧರಬೆಟ್ಟದ ವೀರಭದ್ರ ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ಸಮೀಪದ ಅಬ್ಬಿಗೇರಿ ಗ್ರಾಮದ ಶ್ರೀ ಅನ್ನದಾನೇಶ್ವರ ಶಾಖಾ ಮಠದ ಜಾತ್ರಾ ಮಹೋತ್ಸವದ ಅಂಗವಾಗಿ ಬುಧವಾರ ಹಮ್ಮಿಕೊಂಡಿದ್ದ 11 ಜೋಡಿ ಉಚಿತ ಸಾಮೂಹಿಕ ವಿವಾಹ ಸಮಾರಂಭದ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.



ಮಠ- ಮಾನ್ಯಗಳಲ್ಲಿ ನಿರಂತರ ನಡೆಯುವ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳುವ ಮೂಲಕ ಮಾನಸಿಕ ನೆಮ್ಮದಿ ಪಡೆಯಲು ಸಾಧ್ಯ. ಮಾನವೀಯ ಮೌಲ್ಯಗಳೊಂದಿಗೆ ತೃಪ್ತಿದಾಯಕ ಜೀವನ ನಡೆಸಲು ಸಾಧ್ಯ. ಶರಣರ ಸಂಗವು ಆತ್ಮಕಲ್ಯಾಣಕ್ಕೆ ದಾರಿಯಾಗುವುದು. ಭಕ್ತರ ಉದ್ಧಾರಕ್ಕೆ ಗುರುಕರುಣೆ ಮತ್ತು ಉತ್ತಮ ಸಂಸ್ಕಾರಗಳು ಅಗತ್ಯ. ಸ್ವಾರ್ಥ ರಹಿತ ಮತ್ತು ತ್ಯಾಗ ಸಹಿತ ಕಾಯಕದಿಂದ ಜೀವನದಲ್ಲಿ ಶಾಂತಿ ನೆಲೆಸುತ್ತದೆ. ಸತ್ಯ ಶುದ್ಧ ಕಾಯಕದಿಂದ ಹಣ ಗಳಿಸಿ. ಮನುಷ್ಯ ಆಡಂಬರದ ಬೆನ್ನು ಹತ್ತಿ ಹಾಳಾಗುತ್ತಿದ್ದಾನೆ. ಮನುಷ್ಯನಿಗೆ ಶಾಂತಿ- ನೆಮ್ಮದಿ ಆಧ್ಯಾತ್ಮದಲ್ಲಿ ಮಾತ್ರ ಸಿಗುತ್ತದೆ. ಜಗತ್ತಿನಲ್ಲಿ ಎಲ್ಲರೂ ಹಣ ಗಳಿಸುತ್ತಾರೆ. ಸತ್ಯ ಶುದ್ಧ ಕಾಯಕ ಮಾಡಿ ಹಣ ಗಳಿಸಿದಾಗ ಮಾತ್ರ ಶಾಂತಿ, ನೆಮ್ಮದಿಯಿಂದ ಇರಬಹುದು ಎಂದರು.

ಬೆಳಗ್ಗೆ 5 ಗಂಟೆಗೆ ಕರ್ತೃ ಗದ್ದುಗೆಗೆ ಮಹಾರುದ್ರಾಭಿಷೇಕ ಮತ್ತು ಸಹಸ್ರ ಬಿಲ್ವಾರ್ಚನೆ ನಡೆಯಿತು. ವಟುಗಳಿಗೆ ಅಯ್ಯಾಚಾರ ಮತ್ತು ಶಿವದೀಕ್ಷೆ ನೆರವೇರಿತು. ಶ್ರೀಮಠದ ಭಕ್ತಾದಿಗಳು ಉಪಸ್ಥಿತರಿದ್ದರು. ಉಪನ್ಯಾಸಕ ಬಸವರಾಜ ಪಲ್ಲೇದ ನಿರ್ವಹಿಸಿದರು.

### ನಿಧನ ವಾರ್ತೆ

**ಮಾರ್ಗರೇಟ್ ಎ.ಜೋಸೆಫ್**



ಗದಗ: ನಗರದ ವಿವೇಕಾನಂದ ರಸ್ತೆಯ ಕಾರ್ಮೆಲಿನ್ ವಿಲ್ಲಾದ ನಿವಾಸಿ ಮಾರ್ಗರೆಟ್ ಎ.ಜೋಸೆಫ್ (73) ಬುಧವಾರ ನಿಧನರಾದರು. ಮೃತರು ಮಕ್ಕಳು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು-ಬಳಗ ಅಗಲಿದ್ದಾರೆ.

ಮೃತರ ಅಂತಿಮ ಯಾತ್ರೆಯು ಗುರುವಾರ ಸಂಜೆ 4 ಗಂಟೆಗೆ ಗದಗ ನಗರದ ಸ್ವ ಗೃಹದಿಂದ ಹೊರಡಲಿದ್ದು, ನಗರದ ಇಸಿಐ ಚರ್ಚ್ ಹತ್ತಿರದ ರೈಲ್ವೇ ರುದ್ರಭೂಮಿಯಲ್ಲಿ ಮೃತರ ಅಂತಿಮ ಸಂಸ್ಕಾರ ನೆರವೇರಲಿದೆ.

# ಹುಬ್ಬಳ್ಳಿಯಲ್ಲಿ ಮತ್ತೊಬ್ಬ ಯುವತಿ ಹತ್ಯೆ



■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ನೇಹಾ ಹಿರೇಮಠ್ ಎಂಬ ಯುವತಿಯನ್ನು ಕಾಲೇಜು ಕ್ಯಾಂಪಸ್ ಆವರಣದಲ್ಲೇ ಚುಚ್ಚಿ ಕೊಂದ ಘಟನೆಯ ಕಹಿ ನೆನಪು ಮಾಸುವ ಮುನ್ನವೇ ಮತ್ತೊಬ್ಬ ಯುವತಿಯ ದಾರುಣ ಕೊಲೆಯಾಗಿದೆ.

ಪ್ರೇಮ ನಿರಾಕರಣೆಯ ಕಾರಣಕ್ಕೆ ತಾನು ಪ್ರೀತಿಸಿದ್ದ ಯುವತಿಯನ್ನೇ ಗಿರೀಶ್ ಸಾವಂತ್ ಎಂಬ ಕ್ರೂರಿ ಚಾಕುವಿನಿಂದ ಇರಿದು ಕೊಂದುಹಾಕಿದ್ದಾನೆ.

ವೀರಾಪುರ ಓಣಿಯಲ್ಲಿ ವಾಸಿಸುತ್ತಿದ್ದ ಅಂಜಲಿ ಅಂಬಿಗೇರ ಕೊಲೆಯಾದ ದುರ್ದೈವಿ. ತನ್ನ ಪ್ರೀತಿಯನ್ನು ನಿರಾಕರಿಸಿದಳು ಎಂಬ ಕಾರಣಕ್ಕೆ ಹಂತಕ ಆಕೆಯ ಮನೆಗೇ ನುಗ್ಗಿ ಚಾಕುವಿನಿಂದ ಹಲವು ಬಾರಿ ಚುಚ್ಚಿ ಕೊಂದುಹಾಕಿದ್ದಾನೆ.

ಕೊಲೆ ಆರೋಪಿ ಗಿರೀಶ್ ಸಾವಂತ್ ನನ್ನು ಬೆಂಡಿಗೇರಿ ಪೊಲೀಸರು ಬಂಧಿಸಿ ವಿಚಾರಣೆಗೆ ಒಳಪಡಿಸಿದ್ದಾರೆ. ಬೆಂಡಿಗೇರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ನೇಹಾ ಪ್ರಕರಣದ ನೆನಪು ಮಾಸುವ ಮುನ್ನವೇ ಮತ್ತೋರ್ವ ಯುವತಿಯ ಕಗ್ಗೊಲೆಯಾಗಿರುವುದರಿಂದ ವಾಣಿಜ್ಯ ನಗರಿ ಹುಬ್ಬಳ್ಳಿ ಬೆಚ್ಚಿ ಬಿದ್ದಿದೆ.

# ಲೋಕಾಯುಕ್ತದಿಂದ ಸಾರ್ವಜನಿಕರ ಕುಂದು-ಕೊರತೆ ಸಭೆ






■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದ ನಗರಸಭೆಯ ಸಭಾಭವನದಲ್ಲಿ ಬುಧವಾರ ಲೋಕಾಯುಕ್ತ ಡಿಎಸ್‌ಪಿ ವಿಜಯ ಬಿರಾದಾರ ನೇತೃತ್ವದಲ್ಲಿ ಅಕಾರಿಗಳು ತಾಲೂಕು ಮಟ್ಟದ ಸಾರ್ವಜನಿಕರ ಕುಂದು-ಕೊರತೆ ಹಾಗೂ ಅಹವಾಲು ಸ್ವೀಕಾರ ಕಾರ್ಯಕ್ರಮವನ್ನು ನಡೆಸಿದರು.

ಕಾರ್ಯಕ್ರಮದಲ್ಲಿ ಸಾರ್ವಜನಿಕರಿಂದ ಒಟ್ಟೂ 9 ಅರ್ಜಿಗಳು ಸ್ವೀಕೃತವಾದವು. ಇವುಗಳಲ್ಲಿ 2 ಅರ್ಜಿಗಳಿಗೆ ಸ್ಥಳದಲ್ಲಿಯೇ ಪರಿಹಾರ ಕಲ್ಪಿಸಿ, ಇನ್ನುಳಿದ ಅರ್ಜಿಗಳ ಬಗ್ಗೆ ಪರಿಶೀಲನೆಗೆ ಪರಿಗಣಿಸಲಾಯಿತು.

ಈ ಸಂದರ್ಭದಲ್ಲಿ ಲೋಕಾಯುಕ್ತ ಅಧಿಕಾರಿಗಳಾದ ರವಿ ಪುರುಷೋತ್ತಮ, ಎಸ್. ಎಸ್. ತೇಲಿ, ನಗರಸಭೆಯ ಪೌರಾಯುಕ್ತ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಪ್ರಶಾಂತ ವರಗಪ್ಪನವರ, ತಹಸೀಲ್ದಾರ್ ಶ್ರೀನಿವಾಸಮೂರ್ತಿ ಹಾಗೂ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಪಾಲ್ಗೊಂಡಿದ್ದರು.

# ಶೈಕ್ಷಣಿಕವಾಗಿ ಪ್ರಗತಿ ಹೊಂದುವದು ಮುಖ್ಯ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಬಂಜಾರ ಸಮಾಜದವರು ಮಕ್ಕಳ ಶಿಕ್ಷಣಕ್ಕೆ ಹೆಚ್ಚು ಆದ್ಯತೆ ನೀಡುವದು ಅವಶ್ಯವಾಗಿದೆ. ಇಂದಿನ ದಿನಮಾನಗಳಲ್ಲಿ ಶಿಕ್ಷಣವು ಹೆಚ್ಚು ಮಹತ್ವ ಪಡೆದುಕೊಂಡಿದ್ದರಿಂದ ಎಲ್ಲರೂ ಶೈಕ್ಷಣಿಕವಾಗಿ ಪ್ರಗತಿ ಹೊಂದುವದು ಮುಖ್ಯ ಎಂದು ಗೋವಾದ ಜೀವನ ಹೆಲ್ತ್‌ಕೇರ್ ನರ್ಸಿಂಗ್ ಬ್ಯುರೋ ಏಜೆನ್ಸಿ ಮುಖ್ಯಸ್ಥೆ ಡಾ. ರೇಣುಕಾ ರಾವ್ ಹೊನ್ನಳ್ಳಿ ಹೇಳಿದರು.

ದ್ವಿತೀಯ ಪಿಯುಸಿ ಕಲಾ ವಿಭಾಗದಲ್ಲಿ ರಾಜ್ಯಕ್ಕೆ ಎರಡನೇ ಸ್ಥಾನ ಪಡೆದು ಕೀರ್ತಿ ತಂದ ಆದರಳ್ಳಿ ಗ್ರಾಮದ ರವಿನಾ ಸೋಮಪ್ಪ ಲಮಾಣಿ ಅವರನ್ನು ಸನ್ಮಾನಿಸಲು ಗೋವಾದಿಂದ ಆಗಮಿಸಿ ಕಾರ್ಯಕ್ರಮದಲ್ಲಿ ರವಿನಾಳಿಗೆ ಶುಭ ಹಾರೈಸಿ ಅವರು ಮಾತನಾಡಿದರು.

ಲಂಬಾಣಿ ಸಮಾಜದ ಹೆಣ್ಣುಮಕ್ಕಳು ಶಿಕ್ಷಣದ ಕಡೆ ಗಮನ ಕೊಟ್ಟು ಸಮಾಜದ ಗೌರವವನ್ನು ಹೆಚ್ಚಿಸಬೇಕು. ರವಿನಾಳ ತಂದೆ-ತಾಯಿ ಓದದೆ ಇದ್ದರೂ ಮಗಳನ್ನು ಕಷ್ಟಪಟ್ಟು ಓದಿಸಿ ಈ ಮಟ್ಟಕ್ಕೆ ತಂದಿದ್ದು ಹೆಮ್ಮೆಯ ವಿಷಯವಾಗಿದೆ. ಸಾಧನೆಗೆ ಬಡತನ ಅಡ್ಡಿಯಾಗದು ಎಂಬುದಕ್ಕೆ ಈ ವಿದ್ಯಾರ್ಥಿನಿ ಸಾಕ್ಷಿಯಾಗಿದ್ದಾಳೆ. ಇವಳನ್ನು ಸ್ಫೂರ್ತಿಯಾಗಿ ಪಡೆದುಕೊಂಡು ಮಕ್ಕಳನ್ನು ಶಿಕ್ಷಣವಂತರನ್ನಾಗಿ ಮಾಡಬೇಕು. ಮಕ್ಕಳು ಮೊಬೈಲ್ ಗೀಳಿನಿಂದ ಹೊರ ಬಂದರೆ ಜೀವನದಲ್ಲಿ ಸಾಧನೆ ಮಾಡಬಹುದು. ರವಿನಾಳ ಭವಿಷ್ಯ ಉಜ್ವಲವಾಗಲಿ ಎಂದು ಶುಭ ಹಾರೈಸಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಸಾಧಕ ವಿದ್ಯಾರ್ಥಿನಿ ರವಿನಾ ಲಮಾಣಿ, ದೂರದ ಗೋವಾ ರಾಜ್ಯದಿಂದ ಬಂದು ಸನ್ಮಾನ ಮಾಡುತ್ತಿರುವುದು ಅತೀವ ಸಂತೋಷವಾಗಿದೆ. ಸನ್ಮಾನಗಳೇ ಮುಂದಿನ ಸಾಧನೆಗೆ ಪ್ರೇರಣೆ ಆಗುವಂತಿದೆ. ತಂದೆ-ತಾಯಿಯವರ ಕೃಪೆಯಿಂದ, ಗುರುಹಿರಿಯರ ಆಶೀರ್ವಾದ, ಶುಭ ಹಾರೈಕೆಯಿಂದ ಈ ಸಾಧನೆ ಮಾಡಲು ಸಾಧ್ಯವಾಗಿದೆ. ನನ್ನ ಸಾಧನೆಗೆ ಪ್ರೋತ್ಸಾಹ ನೀಡುತ್ತಿರುವ ಎಲ್ಲರಿಗೂ ಧನ್ಯವಾದಗಳನ್ನು ಅರ್ಪಿಸುವದಾಗಿ ಹೇಳಿದಳು.

ಈ ಸಂದರ್ಭದಲ್ಲಿ ಸಮಂತಾ ಎಚ್, ಸೋಮಪ್ಪ ಲಮಾಣಿ, ರೇಣವ್ವ ಲಮಾಣಿ, ನಾರಾಯಣ ಲಮಾಣಿ, ಸುದೀಪ ಲಮಾಣಿ, ವೆಂಕಟೇಶ ಲಮಾಣಿ, ರೇಷ್ಮಾ ಲಮಾಣಿ ಸೇರಿದಂತೆ ಗ್ರಾಮದ ಅನೇಕ ಹಿರಿಯರು, ಸಂಸ್ಥೆಯ ಸಿಬ್ಬಂದಿಗಳು ಹಾಜರಿದ್ದರು.

## ಬಸವ ಜಯಂತಿ ಕಾರ್ಯಕ್ರಮದಲ್ಲಿ ಸುಮಿತ್ರಾ ಕೋತಂಬರಿ ಅಭಿಮತ

# ಸಾಮರಸ್ಯದ ಬದುಕಿಗೆ ಬಸವತತ್ವ ಪೂರಕ



■ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚಿನ ದಿನಗಳಲ್ಲಿ ಲಿಂಗ-ಜಾತಿ ಬೇಧದಿಂದ ಸಮಾಜದಲ್ಲಿ ಕಲುಷಿತ ವಾತಾವರಣ ನಿರ್ಮಾಣಗೊಳ್ಳುತ್ತಿದೆ. ಮನುಷ್ಯ ಕುಲ ಒಂದೇ ಎಂದು ಸಾರುವ ಮೂಲಕ ಯಾರೂ ಮೇಲಲ್ಲ-ಕೀಳಲ್ಲ ಎಂದು ಸಾರಿದ ಬಸವಣ್ಣನವರು ಸಾಮರಸ್ಯದ ಬದುಕಿಗೆ ಭದ್ರ ಬುನಾದಿ ಹಾಕಿದ ಕಾರಣ ಜಗಜ್ಯೋತಿಯಾಗಿ ಕಾಣಿಸಿಕೊಂಡರು. ಈ ಹಿನ್ನೆಲೆಯಲ್ಲಿ ಸಾಮರಸ್ಯದ ಬದುಕಿಗೆ ಬಸವತತ್ವ ಪೂರಕ ಎಂದು ಸುಮಿತ್ರಾ ಶಿವಶಂಕರ ಕೋತಂಬರಿ ಅಭಿಪ್ರಾಯಪಟ್ಟರು.

ನಗರದ ಶಿವಬಸವ ನಗರದ ಶಿವಬಸವ ಸುಧಾರಣಾ ಸಮಿತಿ ಹಾಗೂ ಶಿವಬಸವ ನಗರ ಮಹಿಳಾ ಮಂಡಳದ ಆಶ್ರಯದಲ್ಲಿ ಶಿವಬಸವೇಶ್ವರ ದೇವಸ್ಥಾನದ ಪ್ರಾಂಗಣದಲ್ಲಿ ಏರ್ಪಡಿಸಿದ್ದ ಬಸವ ಜಯಂತಿ ಕಾರ್ಯಕ್ರಮದಲ್ಲಿ ಅತಿಥಿಗಳಾಗಿ ಪಾಲ್ಗೊಂಡು ಅವರು ಮಾತನಾಡಿದರು.

ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡ ಸಮಿತಿಯ ಗೌರವಾಧ್ಯಕ್ಷರಾದ ಎಂ.ಟಿ. ಸೋರಿ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಮಹಿಳೆಯರು ಪ್ರತಿಯೊಂದು ಕ್ಷೇತ್ರದಲ್ಲೂ ಮುಂಚೂಣಿಯಲ್ಲಿದ್ದು ಸಮಾಜ ಸೇವೆಯಲ್ಲಿ ಪಾಲ್ಗೊಳ್ಳುತ್ತಿರುವುದು ಹೆಮ್ಮೆಯ ಸಂಗತಿ ಎಂದರು. ಶಿವಬಸವ ಸುಧಾರಣಾ ಸಮಿತಿ ಅಧ್ಯಕ್ಷ, ನ್ಯಾಯವಾದಿಗಳಾದ ಶಿವಶಂಕರ ಕೋತಂಬರಿ ಮಾತನಾಡಿ, ಸಮಾಜದ ಏಳ್ಗೆಗಾಗಿ ನಾವೆಲ್ಲಾ ಸಂಘಟನಾಶೀಲರಾಗಬೇಕು. ಸಂಘಟನೆ ಶಕ್ತಿಯು ಅಭಿವೃದ್ಧಿಗೆ ಸದಾ ಸಹಕಾರಿಯಾಗಬಲ್ಲದು. ಬಡಾವಣೆಯ ಒಗ್ಗಟ್ಟು ಅದು ಅಭಿವೃದ್ಧಿಯ ಸಂಕೇತ ಎಂದರು.

ಇನ್ನೋರ್ವ ಅತಿಥಿಗಳಾದ ಸಾಹಿತಿ ಐ.ಕೆ. ಕಮ್ಮಾರ ಮಾತನಾಡಿ ಸಮಾಜದ ಏಳ್ಗೆಗಾಗಿ ನಮ್ಮ ಬದುಕಿನ ಕೆಲವು ಸಮಯ ಮೀಸಲಾಗಿರಸಬೇಕೆಂದರು.

ಎಲ್ಲ ಧರ್ಮೀಯರನ್ನು ಸಮಾನವಾಗಿ ಕಾಣುವ ಮಹಾನ್ ಕನಸುಗಾರ ಬಸವಣ್ಣನವರು. ಅಂತಹ ಶರಣರ ಸ್ಮರಣೆ ತತ್ವಗಳ ಪರಿಪಾಲನೆ ಇಂದಿನ ಅಗತ್ಯ. ಬಸವ ಜಯಂತಿ ಆಚರಣೆ ಎಂದರೆ ಸಮಸ್ತ ಮನುಕುಲ ಒಂದೇ ಎಂಬ ಭಾವನೆ ಪ್ರತಿಯೊಬ್ಬರಲ್ಲೂ ಬರಬೇಕು. ಅವರ ತತ್ವಾದರ್ಶ ಪಾಲನೆ ಮಾಡುವ ಮುಖೇನ ಮನುಷ್ಯ ಜನ್ಮ ಸಾರ್ಥಕ ಪಡಿಸಿಕೊಳ್ಳಬೇಕೆಂದು ಸುಮಿತ್ರಾ ಕೋತಂಬರಿ ಹೇಳಿದರು.

ಬಸವೇಶ್ವರ ಭಾವಚಿತ್ರದ ಮೆರವಣಿಗೆ ಝಾಂಜ ಮೇಳದೊಂದಿಗೆ ಸಂಚರಿಸಿ ಕಾರ್ಯಕ್ರಮದ ವಿಶೇಷತೆ ಹೆಚ್ಚಿಸಿತು. ಮಕ್ಕಳಿಗಾಗಿ ಫ್ಯಾನ್ಸಿ ಡ್ರೆಸ್ ಹಾಗೂ ವಚನ ಸ್ಪರ್ಧೆಯನ್ನು ಏರ್ಪಡಿಸಲಾಗಿತ್ತು.

ರಾಮಣ್ಣ ಮಡಿವಾಳರ, ಸಿದ್ದರಾಮಶೆಟ್ರು, ಶ್ರೀನಿವಾಸ ಮಿಣಜಗಿ, ಎಸ್.ಕೆ. ಇನಾಮದಾರ, ಬಸಣ್ಣ ಚೌಡಕಿ, ಜೋಗಿನ, ಪ್ರಭು ಬ್ಯಾಲಿಹಾಳ, ಶೇಖಪ್ಪಜ್ಜ ಕನ್ಯಾಳ, ಅಸೂಟಿ, ಎಸ್.ಪಿ. ಚಳಗೇರಿ, ಬಿ.ಬಿ. ಹಡಪದ, ಎಚ್.ಎನ್. ಕುರಿ, ಆರ್.ಎಂ. ಕ್ಯಾಮನಗೌಡ್ರ, ವಿಶ್ವನಾಥ ಹಿರೇಮಠ, ಎಸ್.ಎಸ್. ಗಡ್ಡದಮಠ, ಬಿ.ಸಿ. ಇಳಕಲ್ಲ, ನಿಂಗಪ್ಪ ಮಹಿಳಾ ಮಂಡಳದ ಸವಿತಾ ಗಡ್ಡದಮಠ, ರತ್ನಾ ಚಳಿಗೇರಿ, ಸೌಮ್ಯ ಅಸೂಟಿ, ರತ್ನಾ ಕನ್ಯಾಳ, ಮಲ್ಲಮ್ಮ ದಮಾಮಿ, ಕಾವ್ಯಾ ಹುಂಡೇಕರ, ಪೂಜಾ ಹಂಚಿನಾಳ, ಉಷಾ ಗುಡ್ಲಾನೂರ, ರೇಣುಕಾ ಕುಂಬಾರ, ಬಸಮ್ಮಾ, ಸಂಧ್ಯಾ ಬ್ಯಾಲಿಹಾಳ, ಗಂಗಾ ಪೊಲೀಸ್‌ಪಾಟೀಲ, ಸಂಗೀತ ಕಪಲಿ ಸೇರಿದಂತೆ ಬಡಾವಣೆಯ ನೂರಾರು ಮಹಿಳೆಯರು ಪಾಲ್ಗೊಂಡಿದ್ದರು. ಮಂಜುಳಾ ಹಡಪದ ಸ್ವಾಗತಿಸಿ, ಕಾರ್ಯಕ್ರಮ ನಿರ್ವಹಿಸಿದರು.

## ಧಾರವಾಡ ನಗರದ ವಿವಿಧ ಬಡಾವಣೆಗಳಿಗೆ ಜಿಲ್ಲಾಧಿಕಾರಿ ದಿವ್ಯ ಪ್ರಭು ಭೇಟಿ

# ಅಧಿಕಾರಿಗಳು ಇನ್ನಷ್ಟು ಕ್ರಿಯಾಶೀಲರಾಗಿ



■ವಿಜಯಸಾಕ್ಷಿ ಸುದ್ದಿ, ಧಾರವಾಡ

ಮಳೆಗಾಲ ಆರಂಭವಾದರೆ ಚರಂಡಿಯಲ್ಲಿ ಕಸ-ಕಡ್ಡಿ, ಹೂಳು ತುಂಬಿ ಪ್ರವಾಹ ಪರಿಸ್ಥಿತಿ ಉಂಟಾಗುವ ಮತ್ತು ಜನಜೀವನ ಅಸ್ತವ್ಯಸ್ತಗೊಳಿಸುವ ಸಂಭಾವ್ಯ ಪ್ರದೇಶಗಳಲ್ಲಿ ಮಹಾನಗರಪಾಲಿಕೆ ಕೈಗೊಂಡಿರುವ ಸ್ವಚ್ಛತಾ ಕಾರ್ಯ ಮತ್ತು ಸಾರ್ವಜನಿಕರ ಅಭಿಪ್ರಾಯ ತಿಳಿಯಲು ಧಾರವಾಡ ಜಿಲ್ಲಾಧಿಕಾರಿ ದಿವ್ಯ ಪ್ರಭು ಬುಧವಾರ ಬೆಳಿಗ್ಗೆ ಧಾರವಾಡನಗರದ ಹಲವು ಬಡಾವಣೆ, ನಗರಗಳಿಗೆ ಸ್ವತಃ ಭೇಟಿ ನೀಡಿ, ಕಾರ್ಯಪ್ರಗತಿ ಪರಿಶೀಲಿಸಿದರು.

ಆರಂಭದಲ್ಲಿ ಬಸ್ ಡಿಪೊ ಸರ್ಕಲ್, ಬಸ್ ಡಿಪೊ ಪಕ್ಕದ ರಾಜಕಾಲುವೆ, ಮದಿಹಾಳ, ನಿಜಾಮುದ್ದಿನ ಕಾಲೋನಿ, ಎಂ.ಆರ್. ನಗರ ನಾಲಾ ಪ್ರದೇಶಗಳಿಗೆ ಭೇಟಿ ನೀಡಿ, ನಾಲಾ ಸ್ವಚ್ಛಗೊಳಿಸಿದ್ದರೂ ಕೆಲವಡೆ ಮತ್ತೆ ಸಾರ್ವಜನಿಕರು ಕಸ-ಕಡ್ಡಿ, ಪ್ಲಾಸ್ಟಿಕ್ ಚೆಲ್ಲಿರುವುದನ್ನು ಗಮನಿಸಿ, ಸಾರ್ವಜನಕರಲ್ಲಿ ಸ್ವಚ್ಛತೆ ಬಗ್ಗೆ ಅರಿವು ಮೂಡಿಸಿ, ತಪ್ಪಿದಲ್ಲಿ ಮಹಾನಗರ ಪಾಲಿಕೆ ನಿಯಮಾವಳಿಗಳ ಪ್ರಕಾರ ದಂಡ ವಿಧಿಸಿ, ಹೆಚ್ಚುವರಿ ಟ್ಯಾಕ್ಸ್ ಹಾಕಿ ಎಂದು ಸೂಚಿಸಿದರು.

ಮುಂಗಾರು ಪೂರ್ವ ಮಳೆಗಳಿಂದ ಮತ್ತು ಮಾನ್ಸೂನ್ ಮಳೆಗಳಿಂದ ಉಂಟಾಗುವ ಸಮಸ್ಯೆಗಳನ್ನು ತ್ವರಿತವಾಗಿ ಬಗೆಹರಿಸಲು ಮತ್ತು ಜನಜೀವನ ಅಸ್ತವ್ಯಸ್ತ ಆಗದಂತೆ ಮುನ್ನೆಚರಿಕೆ ವಹಿಸಲು ಪ್ರತಿ ವಲಯಕ್ಕೆ ಒಂದು ಕ್ಷಿಪ್ರ ಕಾರ್ಯಪಡೆ (ರೆಸ್ಕ್ಯೂಟಿಂಗ್)ಗಳನ್ನು ರಚಿಸಲು ಮತ್ತು ಈಗಾಗಲೇ ಇರುವ ಪಡೆಗಳಿಗೆ ಏರಿಯಾ ಹಂಚಿಕೆ ಮಾಡಿ, ಜನರ ದೂರು ಬಂದ ತಕ್ಷಣ ಅಟೆಂಡ್ ಮಾಡಲು ಸೂಚಿಸಿದರು.

ಹೆಸ್ಕಾಂ ಅಧಿಕಾರಿಗಳಿಂದ ನಗರದ ಪ್ರತಿ ವಿದ್ಯುತ್ ಕಂಬದ ಶಿಥಿಲತೆ, ತಂತಿಗಳು ಜೊತು ಬಿದ್ದಿರುವುದು, ಸಾರ್ವಜನಿಕರಿಗೆ ತಲುಪುವಂತೆ ಇರುವ ಮತ್ತು ಓಪನ್ ಎಲೆಕ್ಟ್ರಿಕಲ್ ಬೋರ್ಡ್‌ಗಳ ಬಗ್ಗೆ ಪರಿಶೀಲಿಸಿ, ಮೇ ತಿಂಗಳ ಅಂತ್ಯದೊಳಗೆ ಸಾರ್ವಜನಿಕ ಹಾನಿ ಆಗದಂತೆ ದುರಸ್ತಿ, ಮುನ್ನೆಚ್ಚರಿಕೆ ಕ್ರಮವಹಿಸಿ, ವರದಿ ಪಡೆದುಕೊಳ್ಳುವಂತೆ ಜಿಲ್ಲಾಧಿಕಾರಿಗಳು ಮಹಾನಗರಪಾಲಿಕೆ ಆಯುಕ್ತ ಡಾ.ಈಶ್ವರ ಉಳ್ಳಾಗಡ್ಡಿ ಅವರಿಗೆ ಸೂಚಿಸಿದರು.

ಮಳೆ, ಗಾಳಿ, ಸಿಡಿಲು, ಗುಡುಗು ಮಿಂಚು ಇವುಗಳಿಂದ ಜೀವ ಹಾನಿ ಆಗದಂತೆ ಸಾರ್ವಜನಿಕ ಅರಿವು ಕಾರ್ಯಕ್ರಮಗಳನ್ನು ಮಹಾನಗರಪಾಲಿಕೆ ಸೇರಿದಂತೆ ಜಿಲ್ಲೆಯ ಎಲ್ಲ ನಗರ, ಪಟ್ಟಣ, ಗ್ರಾಮಗಳಲ್ಲಿ ಆಯೋಜಿಸಲು ಈಗಾಗಲೇ ಸೂಚಿಸಲಾಗಿದೆ. ಈ ಕುರಿತು ಕ್ರಮವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ಅಧಿಕಾರಿಗಳಿಗೆ ತಿಳಿಸಿದರು.

ಅತಿಯಾದ ಮಳೆ, ಮಳೆ ಪ್ರವಾಹಗಳ ಕಾರಣದಿಂದಾಗಿ ಯಾವುದೇ ಜಾನುವಾರು, ಮಾನವ ಜೀವಹಾನಿ ಆಗದಂತೆ ಮತ್ತು ಸಾರ್ವಜನಿಕ ಸ್ವತ್ತು ಹಾನಿ ಆಗದಂತೆ ಎಲ್ಲ ರೀತಿಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವುದು ಮಹಾನಗರ ಪಾಲಿಕೆ ಕರ್ತವ್ಯವಾಗಿದೆ. ಆಯುಕ್ತರು ನಿರಂತರ ನಿಗಾ, ಉಸ್ತುವಾರಿ ವಹಿಸಿ, ಸಾರ್ವಜನಿಕರಿಗೆ ತೊಂದರೆ ಆಗದಂತೆ ನೋಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳು ಸೂಚಿಸಿದರು.

ಮಳೆ, ಗಾಳಿ ಹಾಗೂ ಇತರ ಪ್ರಕೃತಿ ವಿಕೋಪದಿಂದ ತೊಂದರೆಗಳು ಉಂಟಾದಾಗ ಸಾರ್ವಜನಿಕರಿಗೆ ತಕ್ಷಣ ಸಂಪರ್ಕಿಸಲು ಅನುಕೂಲವಾಗುವಂತೆ ಮಹಾನಗರ ಪಾಲಿಕೆಯ ಎಲ್ಲ ವಲಯ ಆಯುಕ್ತರ ಮತ್ತು ಪಾಲಿಕೆಯ ಸಹಾಯವಾಣಿ ಸಂಖ್ಯೆಯನ್ನು ವ್ಯಾಪಕವಾಗಿ ಪ್ರಚಾರ ಮಾಡಬೇಕು ಎಂದು ಸೂಚನೆ ನೀಡಿದರು.

ಮಹಾನಗರದ ಜನತೆ ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆಯನ್ನು ಸ್ವಚ್ಛ, ಸುಂದರ ಮತ್ತು ಸುಸಜ್ಜಿತ ನಗರವಾಗಿಸಲು ಆಯಕ್ತರಿಗೆ ಮತ್ತು ಪಾಲಿಕೆ ಅಧಿಕಾರಿಗಳಿಗೆ ಸಹಕಾರ ನೀಡಬೇಕೆಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಸಾರ್ವಜನಿಕರಿಗೆ ತಿಳಿಸಿದರು.

# ಸಾಧಕ ವಿದ್ಯಾರ್ಥಿನಿ ರೇವತಿಗೆ ಸನ್ಮಾನ



■ವಿಜಯಸಾಕ್ಷಿ ಸುದ್ದಿ, ಗದಗ

ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಗದಗ ಜಿಲ್ಲೆಗೆ 4ನೇ ಸ್ಥಾನ ಪಡೆದ ಗದಗ-ಬೆಟಗೇರಿಯ 25ನೇ ವಾರ್ಡಿನ ವಿದ್ಯಾರ್ಥಿನಿ ರೇವತಿ ನಾರಾಯಣ ಉತ್ತರಕರ್ ಇವರಿಗೆ ಗದಗ-ಬೆಟಗೇರಿ ನಗರಸಭೆ ವಾರ್ಡ್ ನಂ. 25ರ ಸದಸ್ಯರು, ವಾರ್ಡಿನ ಹಿರಿಯರಾದ ವಿನಾಯಕ್ ಶಿವಪ್ಪ ಮಾನ್ವಿ ನೇತೃತ್ವದಲ್ಲಿ ಸನ್ಮಾನಿಸಿ, ಗೌರವಿಸಲಾಯಿತು.

ಈ ಸಂದರ್ಭದಲ್ಲಿ ವಾದಿರಾಜ ಹರಿವಲ್, ಉಮೇಶ್ ಅಕ್ಕಿ, ವೀರೇಶ ಅಕ್ಕಿ ಸಂಗಮೇಶ್ ಅಕ್ಕಿ, ಶ್ರೀಕಾಂತ್ ಕಂಪ್ಲಿ, ಹನುಮಂತ್ ರಂಗರೇಜಿ, ಸಂತೋಷ್ ಹುಬ್ಬಳ್ಳಿ,ಸಿದ್ದರಾಮೇಶ್ವರ ಹಿರೇಮಠ್, ಬಸಣ್ಣ ಅಂಗಡಿ, ಶಿವಣ್ಣ ಜೋಳದ್ ಹಾಗೂ ಇತರರು ಉಪಸ್ಥಿತರಿದ್ದರು.

# ಸಿಎಎ ಅಡಿ 14 ಮಂದಿಗೆ ಭಾರತೀಯ ಪೌರತ್ವ ಪ್ರಮಾಣ ಪತ್ರ ವಿತರಣೆ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಪೌರತ್ವ ತಿದ್ದುಪಡಿ ಕಾಯ್ದೆ(ಸಿಎಎ) ಅಡಿ ಮೊದಲ ಹಂತದಲ್ಲಿ 14 ಜನರಿಗೆ ಕೇಂದ್ರ ಗೃಹ ಸಚಿವಾಲಯ ಇಂದು (ಮೇ 15) ಪ್ರಮಾಣ ಪತ್ರ ವಿತರಿಸಿದೆ.ಪಾಕಿಸ್ತಾನ, ಬಾಂಗ್ಲಾದೇಶ ಮತ್ತು ಅಫ್ಘಾನಿಸ್ತಾನದಿಂದ ಭಾರತಕ್ಕೆ ಬಂದು ನೆಲೆಸಿರುವ 14 ಜನರಿಗೆ ಕೇಂದ್ರ ಗೃಹ ಕಾರ್ಯದರ್ಶಿ ಅಜಯ್ ಕುಮಾರ್ ಭಲ್ಲಾ ಅವರು ಪ್ರಮಾಣ ಪತ್ರ ನೀಡಿದ್ದಾರೆ.

ಸಿಎಎ ಅಡಿ ಡಿಸೆಂಬರ್ 31, 2014ರ ಮೊದಲು ಪಾಕಿಸ್ತಾನ, ಬಾಂಗ್ಲಾದೇಶ ಮತ್ತು ಅಫ್ಘಾನಿಸ್ತಾನದಿಂದ ಭಾರತಕ್ಕೆ ಬಂದ ದಾಖಲೆರಹಿತ ಮುಸ್ಲಿಮೇತರ ವಲಸಿಗರಿಗೆ ಪೌರತ್ವ ಅರ್ಜಿಯ ಅರ್ಹತೆಯ ಅವಧಿಯನ್ನು 11 ರಿಂದ 5 ವರ್ಷಗಳಿಗೆ ಕಡಿಮೆ ಮಾಡಲಾಗಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka